ಸಂಪುಟ: 06 ಸಂಚಿಕೆ: 132 ಪುಟಗಳು: 08 ಶನಿವಾರ 25 ಜುಲೈ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಹೊರ ಸೌಂದರ್ಯ ನಮ್ಮ ಲಕ್ಷ್ಯವನ್ನು ಸೆಳೆದರೆ, ವ್ಯಕ್ತಿತ್ವ ಹೃದಯವನ್ನು ತಟ್ಟುತ್ತದೆ. ಉತ್ತಮ ವ್ಯಕ್ತಿತ್ವದಿಂದ ಎಲ್ಲರನ್ನೂ ಆಕರ್ಷಿಸೋಣ!

# ಮೋದಿ ಕೆಂಡ ಪ್ರಶ್ನೆಪತ್ರಿಕೆ ಲೀಕಾಸುರರಿಗೆ ದಂಡ

## ಕಠಿಣ ಕಾನೂನಿಗೆ ಪ್ರಸ್ತಾಪ

## 10 ವರ್ಷ ಜೈಲು



ನೀಟ್‌ಪ್ರಶ್ನೆಪತ್ರಿಕೆ ಸೋರಿಕೆ ವಿಚಾರವಾಗಿ ರಾಷ್ಟ್ರದ ವಿದ್ಯಾರ್ಥಿ ಸಮುದಾಯವನ್ನು ವಿಡಿಯೋ ಸಂದೇಶದ ಮೂಲಕ ಸಂಪರ್ಕಿಸಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ, ಅಕ್ರಮದಲ್ಲಿ ಭಾಗಿಯಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ. ಅಲ್ಲದೇ ಇಂತಹ ವಂಚನೆಗಳ ವಿರುದ್ಧ ಅಸ್ತಿತ್ವದಲ್ಲಿರುವ ಕಾನೂನುಗಳನ್ನು ಮತ್ತಷ್ಟು ಕಠಿಣಗೊಳಿಲು, ಕೇಂದ್ರ ಸಚಿವ ಸಂಪುಟ ಸಮ್ಮತಿ ಸೂಚಿಸಿದೆ. ತಪ್ಪಿತಸ್ಥರೆಂದು ಸಾಬೀತಾದವರಿಗೆ 10 ವರ್ಷ ಜೈಲು, 10 ಕೋಟಿ ರೂಪಾಯಿವರೆಗಿನ ದಂಡ ವಿಧಿಸುವ ನಿಯಮ ಜಾರಿಗೆ ತರಲು ಪ್ರಧಾನಿ ಮೋದಿ ಮುಂದಾಗಿದ್ದಾರೆ. ವಿಡಿಯೋ ಸಂದೇಶದಲ್ಲಿ ನೀಟ್ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿರುವ ಪ್ರಧಾನಿ ಮೋದಿ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಸಾಮಾನ್ಯ ವಿಷಯವಲ್ಲ. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿದೆ. ತಪ್ಪಿತಸ್ಥರಿಗೆ ಕಾನೂನಿನ್ವಯ ಶಿಕ್ಷೆ ಖಚಿತಪಡಿಸುವುದು ನಮ್ಮ ಪ್ರಾಥಮಿಕ ಆದ್ಯತೆಯ. ಇದಕ್ಕಾಗಿ ಅಸ್ತಿತ್ವದಲ್ಲಿರುವ ಕಾನೂನನ್ನು ಬದಲಿಸಲು ಸಿದ್ಧ ಎಂದು ಭರವಸೆ ನೀಡಿದರು. ಸರ್ಕಾರದ ಜೊತೆ ಮಾತುಕತೆ ಬಳಿಕ ಉಪವಾಸ ಸತ್ಯಾಗ್ರಹ ಕೈಬಿಟ್ಟಿರುವ ಸೋನಮ್ ವಾಂಗ್‌ಚುಕ್ ಅವರಿಗೆ ಪ್ರಧಾನಿ ಮೋದಿ ಧನ್ಯವಾದ ಅರ್ಪಿಸಿದ್ದಾರೆ. ಎಲ್ಲರೂ ಒಟ್ಟಾಗಿ ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವುದಾಗಿ ಪ್ರಧಾನಿ ಮೋದಿ ಸಕಾರಾತ್ಮಕ ಮಾತುಗಳನ್ನಾಡಿದ್ದಾರೆ. ವಿದ್ಯಾರ್ಥಿಗಳಿಗೆ ಪ್ರಧಾನಿ ಮೋದಿ ಅವರ ವಿಡಿಯೋ ಸಂದೇಶದ ಬಳಿಕ, ನೀಟ್ ಬಿಕ್ಕಟ್ಟನ್ನು ಶಮನಗೊಳಿಸುವ ಆಶಾಭಾವನೆ ಮೂಡಿದೆ. ಈಗ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ಕೊಡಿಸುವ ಭರವಸೆಯನ್ನೂ ದೇಶಕ್ಕೆ ನೀಡಿದ್ದಾರೆ. ತ್ವರಿತಗತಿ ನ್ಯಾಯಾಲಯಗಳು ಈ ಪ್ರಕರಣವನ್ನು ಇತ್ಯರ್ಥಪಡಿಸಿ ಮೂರು ತಿಂಗಳೊಳಗೆ ಶಿಕ್ಷೆಯನ್ನು ಪ್ರಕಟಿಸುವುದು ಕಡ್ಡಾಯವಾಗಿದೆ.

## ಹೆದ್ದಾರಿ ಬದಿಯ ಗ್ರಾನೈಟ್ ಮಳಿಗೆ, ಜಾಹೀರಾತು ಫಲಕಕ್ಕೆ ಶುಲ್ಕ ವಿಧಿಸಿ: ಖಂಡ್ರೆ



• ಉದಯವಾಹಿನಿ, ಬೆಂಗಳೂರು

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಹೆದ್ದಾರಿ, ರಾಜ್ಯ ಮುಖ್ಯರಸ್ತೆಯ ಪಕ್ಕದಲ್ಲಿ ವಾಣಿಜ್ಯ ಚಟುವಟಿಕೆ ನಡೆಸುವ ಗ್ರಾನೈಟ್, ಮಾರ್ಬಲ್ ಮಾರಾಟದ ತಾತ್ಕಾಲಿಕ ಮಳಿಗೆಗಳು, ಢಾಬಾಗಳು, ಹೋಟೆಲ್ ಇತ್ಯಾದಿಗಳಿಗೆ ನಿಯಮಾನುಸಾರ ಶುಲ್ಕ, ತೆರಿಗೆ ವಿಧಿಸಲು ಸಮಿತಿ ರಚಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಸಚಿವರು, ಹೆದ್ದಾರಿ, ಜಿಲ್ಲಾ ಮುಖ್ಯರಸ್ತೆ ಪಕ್ಕದಲ್ಲಿರುವ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಂದಾಯ ಭೂಮಿಯಲ್ಲಿ ತಾತ್ಕಾಲಿಕ ಶೆಡ್ ನಿರ್ಮಿಸಿ ಗ್ರಾನೈಟ್ ಇತ್ಯಾದಿ ಮಾರಾಟ ಮಾಡುವ, ಹೋಟೆಲ್, ಢಾಬಾ, ಅಂಗಡಿ, ಮಳಿಗೆಗಳು ಕಾರ್ಯನಿರ್ವಹಿಸುತ್ತಿದ್ದರೂ ಇದರಿಂದ ಪಂಚಾಯತಿಗಳಿಗೆ ಸೂಕ್ತ ಆದಾಯ ಬರುತ್ತಿಲ್ಲ. ಶುಲ್ಕ ವಿಧಿಸುವ ಬಗ್ಗೆ ನಿರ್ದೇಶನ ನೀಡಿದ್ದಾರೆ. ಇದರ ಜೊತೆಗೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಆಯಕಟ್ಟಿನ ಜಾಗಗಳಲ್ಲಿ ಬೃಹತ್ ಫಲಕಗಳನ್ನು ಹಾಕಿ ಜಾಹೀರಾತುಗಳನ್ನು ಪ್ರದರ್ಶಿಸಲಾಗುತ್ತದೆ. ಮನೆಗಳಿಗೂ ಬಣ್ಣ ಬಳಿದು ಜಾಹೀರಾತು ಪ್ರದರ್ಶಿಸಲಾಗುತ್ತದೆ. ಆದರೆ ವಾಣಿಜ್ಯ ವಹಿವಾಟು ನಡೆಯುವ ಈ ಎಲ್ಲಾ ಪ್ರದೇಶ ವಾಣಿಜ್ಯ ಉದ್ದೇಶಕ್ಕೆ ಭೂಪರಿವರ್ತನೆ ಆಗಿರುವುದಿಲ್ಲ. ಈ ನಿಟ್ಟಿನಲ್ಲಿ ಸಮಿತಿ ರಚಿಸಿ, ವರದಿ ಪಡೆದು ವಾಣಿಜ್ಯ ವಹಿವಾಟು ಮತ್ತು ಜಾಹೀರಾತು ಪ್ರದರ್ಶನದ ಭೂಮಿಗೆ ಶುಲ್ಕ ವಿಧಿಸಲು ನಿಯಮ ರೂಪಿಸುವಂತೆ ಸೂಚನೆ ನೀಡಿದ್ದಾರೆ.

## ಎಸಿಪಿ ರಾಜೇಶ್‌ಗೆ ಡಿಜಿ ಪದಕ ಪ್ರದಾನ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಪೊಲೀಸ್ ಅಧಿಕಾರಿ ಎಸಿಪಿ ಎಲ್.ವೈ ರಾಜೇಶ್ ಅವರಿಗೆ ಡಿಜಿ ಪದಕವನ್ನು ಪ್ರದಾನ ಮಾಡಲಾಯಿತು. ಸದ್ಯ ರಾಜೇಶ್ ಅವರು ಸಿಸಿಬಿಯಲ್ಲಿ ಎಸಿಪಿ ಆಗಿ ಕೆಲಸ ಮಾಡುತ್ತಿದ್ದು, ಡ್ರಗ್ಸ್ ಮುಕ್ತ ಬೆಂಗಳೂರಿಗಾಗಿ ಸಾಕಷ್ಟು ಕೆಲಸ ಮಾಡುತ್ತಿರುವ ಹೆಮ್ಮೆ ಅವರದ್ದು. ಕನ್ನಡದ ಯುವ ನಟ ಭೀಮ ಚಿತ್ರ ಖ್ಯಾತಿಯ ಜಯಸೂರ್ಯ ಅವರ ತಂದೆಯೂ ಆಗಿರುವ ರಾಜೇಶ್ ಅವರು, ಪೊಲೀಸ್ ಸೇವೆಯ ಜೊತೆ ಜೊತೆಗೆ ಸಮಾಜಮುಖಿ ಕೆಲಸಗಳಲ್ಲೂ ತೊಡಗಿಸಿಕೊಂಡಿದ್ದಾರೆ. ಪ್ರತಿ ವರ್ಷವೂ ಫೇಲ್ ಆಗಿರುವ ಎಸ್.ಎಸ್.ಎಲ್.ಸಿ ಮಕ್ಕಳಿಗಾಗಿ ವಿಶೇಷ ಶಿಬಿರವನ್ನು ಆಯೋಜನೆ ಮಾಡಿ, ಅವರ ಶೈಕ್ಷಣಿಕ ಪ್ರಗತಿಗೆ ಕಾರಣವಾಗಿದ್ದಾರೆ. ಬೆಂಗಳೂರಿನ ವಿವಿಧ ಪೊಲೀಸ್ ಠಾಣೆಗಳಲ್ಲಿ ಕೆಲಸ ಮಾಡಿರುವ ರಾಜೇಶ್, ಲೋಕಾಯುಕ್ತದಲ್ಲೂ ಅಧಿಕಾರಿಯಾಗಿ ಕೆಲಸ ಮಾಡಿದ್ದಾರೆ. ತಮ್ಮ ಪೊಲೀಸ್ ಠಾಣೆಯ ಸರಹದ್ದಿನಲ್ಲಿ ಸಾಕಷ್ಟು ಬದಲಾವಣೆ ತಂದಿರುವ ಇವರಿಗೆ, ಈಗಾಗಲೇ ಅನೇಕ ಪದಕಗಳು ಕೂಡಾ ಸಂದಿವೆ.

## ಯುವಕರು ಮೋದಿ ಮೇಲೆ ವಿಶ್ವಾಸ ಇಟ್ಟಿದ್ದಾರೆ, ಪ್ರಧಾನಿಗಳ ಮಾತು ಸಮಾಧಾನ ತಂದಿದೆ: ಸುನೀಲ್ ಕುಮಾರ್

• ಉದಯವಾಹಿನಿ, ಬೆಂಗಳೂರು

ನೀಟ್ ಅಕ್ರಮದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರ ಮಾತು ಸಮಾಧಾನ ತಂದಿದೆ ಅಂತ ಮಾಜಿ ಸಚಿವ ಸುನೀಲ್ ಕುಮಾರ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ನೀಟ್ ಪೇಪರ್ ಸೋರಿಕೆ ಬಗ್ಗೆ ವಿದ್ಯಾರ್ಥಿಗಳ ಆಕ್ರೋಶ ಎದ್ದಿತ್ತು. ಕೇಂದ್ರ ಸರ್ಕಾರ ಮತ್ತು ಪ್ರಧಾನಿ ಮೋದಿ ಅವರು ಪೂರಕವಾದ ಸ್ಪಂದನೆ ನೀಡಿದ್ದಾರೆ. ನೀಟ್ ಹಗರಣ ತನಿಖೆಗೆ ಸರ್ಕಾರ ಮಾಡ್ತು. ಮರು ಪರೀಕ್ಷೆ ಮಾಡಿದೆ. ಯಶಸ್ವಿಯಾಗಿ ಫಲಿತಾಂಶ ಕೊಟ್ಟಿದೆ. ಈಗ ಪ್ರಧಾನಿಗಳು ಫಾಸ್ಟ್‌ಟ್ರ್ಯಾಕ್ ಕೋರ್ಟ್ ಮಾಡೋದಾಗಿ ಘೋಷಣೆ ಮಾಡಿದ್ರು. ಆರೋಪಿಗಳ ವಿರುದ್ಧ ಕಠಿಣ ಕ್ರಮದ ಭರವಸೆ ನೀಡಿರೋದು ಸಮಾಧಾನ ತಂದಿದೆ ಎಂದು ಹೇಳಿದ್ದಾರೆ. ಮೋದಿ ಅವರ ಮಾತು ವಿದ್ಯಾರ್ಥಿಗಳಿಗೆ ಸಮಾಧಾನ ತಂದಿದೆ. ವಿದ್ಯಾರ್ಥಿಗಳು ಹೋರಾಟ ಮಾಡೋದು ಸರಿ. ಆದರೆ ಇದರ ಲಾಭ ವಿಪಕ್ಷಗಳು ಪಡೆಯೋದಕ್ಕೆ ಮುಂದಾಗಿದೆ. ಪ್ರಧಾನಿಗಳೇ ಹೇಳಿಕೆ, ಪರಿಹಾರ ಕೊಟ್ಟಿದ್ದಾರೆ. ವಿದ್ಯಾರ್ಥಿಗಳು ಪೂರಕವಾಗಿ ಸ್ಪಂದಿಸಬೇಕು. ಯುವಕರು ಮೋದಿ ಮೇಲೆ ವಿಶ್ವಾಸ ಇಟ್ಟಿದ್ದಾರೆ. ಈಗಾಗಲೇ ಹಲವು ಕ್ರಮ ಕೇಂದ್ರ ಸರ್ಕಾರ ತೆಗೆದುಕೊಂಡಿದೆ. ಯಾವುದೇ ಪರೀಕ್ಷೆಗಳು ಸೋರಿಕೆ ಆಗದಂತೆ ನಾವು ಕ್ರಮ ತೆಗೆದುಕೊಳ್ಳಬೇಕು. ಗಂಭೀರವಾಗಿ ತೆಗೆದುಕೊಂಡು ಶಾಶ್ವತ ಪರಿಣಾಮ ತೆಗೆದುಕೊಳ್ಳಬೇಕು ಅಂತ ಕರೆ ನೀಡಿದ್ದಾರೆ.

## ಪದ್ಮನಾಭನಗರ ನಿವಾಸಕ್ಕೆ ಭೇಟಿ ನೀಡಿ ದೇವೇಗೌಡರಿಗೆ ಸಾಂತ್ವನ ಹೇಳಿದ ಗವರ್ನರ್, ಯತ್ನಾಳ್



• ಉದಯವಾಹಿನಿ, ಬೆಂಗಳೂರು

ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡರ ಪತ್ನಿ ಚೆನ್ನಮ್ಮ ಅವರು ವಿಧಿವಶರಾದ ಹಿನ್ನೆಲೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಹೆಚ್‌ಡಿಡಿ ಅವರನ್ನು ಭೇಟಿಯಾಗಿ, ಸಾಂತ್ವನ ಹೇಳಿದ್ದಾರೆ. ಪದ್ಮನಾಭನಗರ ನಿವಾಸಕ್ಕೆ ಭೇಟಿ ನೀಡಿದ ರಾಜ್ಯಪಾಲರು ದೇವೇಗೌಡರಿಗೆ ಸಾಂತ್ವನ ಹೇಳಿದ್ದಾರೆ. ರಾಜ್ಯಪಾಲರ ಭೇಟಿ ವೇಳೆ ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಅವರು ಉಪಸ್ಥಿತರಿದ್ದರು. ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಕೂಡ ಶುಕ್ರವಾರ ಪದ್ಮನಾಭನಗರ ನಿವಾಸಕ್ಕೆ ಭೇಟಿ ನೀಡಿ, ದೇವೇಗೌಡರಿಗೆ ಸಾಂತ್ವನ ಹೇಳಿದ್ದಾರೆ.

## ಸೋನಮ್ ವಾಂಗ್ಚುಕ್ ಉಪವಾಸ ಅಂತ್ಯ

ಶಿಕ್ಷಣ ಸಚಿವರ ರಾಜೀನಾಮೆಗೆ ಪಟ್ಟು ಹಿಡಿದು ಜೂನ್ 28ರಿಂದ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ಖ್ಯಾತ ಹೋರಾಟಗಾರ ಸೋನಮ್ ವಾಂಗ್ಚುಕ್ ಅವರು ಇಂದು ತಮ್ಮ ಉಪವಾಸವನ್ನು ಅಂತ್ಯಗೊಳಿಸಿದ್ದಾರೆ. ಆರೋಗ್ಯ ಹದಗೆಟ್ಟ ಹಿನ್ನೆಲೆಯಲ್ಲಿ ಜುಲೈ 18ರಂದು ಅವರನ್ನು ಸಫ್ದರ್ ಜಂಗ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸಾ ನಿರ್ಲಕ್ಷ್ಯವಾಗುತ್ತಿದೆ ಎಂದು ಆರೋಪಿಸಿ ಅವರ ಪತ್ನಿ ಗೀತಾಂಜಲಿ ಆಂಗ್ಮೋ ದೆಹಲಿ ಹೈಕೋರ್ಟ್ ಮೆಟ್ಟಿಲೇರಿದ್ದರು. ಎರಡು ದಿನಗಳ ವಿಚಾರಣೆಯ ಬಳಿಕ, ವಾಂಗ್ಚುಕ್ ಅವರನ್ನು ಗುರುಗ್ರಾಮದ ಮೆದಾಂತ ಆಸ್ಪತ್ರೆಗೆ ಸ್ಥಳಾಂತರಿಸಲು ಕೋರ್ಟ್ ಅನುಮತಿ ನೀಡಿತ್ತು. ಅಲ್ಲಿಯೇ ಅವರು ಉಪವಾಸ ಕೈಬಿಟ್ಟಿದ್ದಾರೆ.

- ಮೋದಿ ಸರ್ಕಾರದಿಂದ ಕಠಿಣಾತಿಕಠಿಣ ಕಾನೂನು
- ನೀಟ್ ಅಕ್ರಮಗಳಿಗೆ ಕಡಿವಾಣ ಹಾಕಲು ಕಠಿಣ ಕಾನೂನಿಗೆ ಪ್ರಸ್ತಾಪ
- ಪರೀಕ್ಷೆಗಳ ಅಕ್ರಮ ತಡೆಗಟ್ಟುವಿಕೆ ಕಾಯ್ದೆ
- ನೀಟ್ ವಿಚಾರಕ್ಕೆ ಸುಪ್ರೀಂಕೋರ್ಟ್ ಎಂಟ್ರಿ! ಕೇಂದ್ರ ಸರ್ಕಾರಕ್ಕೆ ಚಾಟಿ



## ಮೂರು ತಿಂಗಳೊಳಗೆ ವಿಚಾರಣೆ ಪೂರ್ಣಗೊಳಿಸುವುದು ಕಡ್ಡಾಯ

ಇದರ ಜೊತೆಗೆ, ಇಂತಹ ಪ್ರಕರಣಗಳ ತ್ವರಿತ ವಿಚಾರಣೆಗೆ ಫಾಸ್ಟ್ ಟ್ರ್ಯಾಕ್ ನ್ಯಾಯಾಲಯಗಳನ್ನು ಸ್ಥಾಪಿಸಲಾಗುತ್ತದೆ. ಪ್ರಕರಣ ದಾಖಲಾಗಿದ ನಂತರ ಮೂರು ತಿಂಗಳೊಳಗೆ ವಿಚಾರಣೆ ಪೂರ್ಣಗೊಳಿಸಿ ತೀರ್ಪು ನೀಡುವುದು ಕಡ್ಡಾಯವಾಗಲಿದೆ. ಇದರಿಂದ ವರ್ಷಗಟ್ಟಲೆ ನ್ಯಾಯಕ್ಕಾಗಿ ಕಾಯುವ ಪರಿಸ್ಥಿತಿ ತಪ್ಪಲಿದೆ ಎಂದು ಸರ್ಕಾರ ಹೇಳಿದೆ. ಪ್ರಸ್ತುತ ಜಾರಿಯಲ್ಲಿರುವ 2024ರ ಸಾರ್ವಜನಿಕ ಪರೀಕ್ಷೆಗಳ ಕಾಯ್ದೆಯ ಪ್ರಕಾರ, ಪ್ರಶ್ನೆಪತ್ರಿಕೆ ಸೋರಿಕೆಗೆ 3ರಿಂದ 5 ವರ್ಷ ಜೈಲು ಹಾಗೂ 10 ಲಕ್ಷದವರೆಗೆ ದಂಡ ವಿಧಿಸುವ ಅವಕಾಶವಿದೆ. ಸಂಘಟಿತ ಗ್ಯಾಂಗ್ ಭಾಗಿಯಾಗಿದ್ದರೆ 5ರಿಂದ 10 ವರ್ಷ ಜೈಲು ಮತ್ತು ಕನಿಷ್ಠ 1 ಕೋಟಿ ದಂಡ ವಿಧಿಸಲಾಗುತ್ತದೆ. ಹೊಸ ತಿದ್ದುಪಡಿ ಈ ಕಾನೂನನ್ನು ಇನ್ನಷ್ಟು ಕಠಿಣಗೊಳಿಸಿ, ಶಿಕ್ಷೆಯ ಪ್ರಮಾಣವನ್ನು ಹೆಚ್ಚಿಸುವ ಜೊತೆಗೆ ತ್ವರಿತ ನ್ಯಾಯದ ವ್ಯವಸ್ಥೆಯನ್ನು ಒದಗಿಸುತ್ತದೆ.

• ಉದಯವಾಹಿನಿ, ನವದೆಹಲಿ

ನೀಟ್-ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಖಂಡಿಸಿ ದೇಶಾದ್ಯಂತ ಪ್ರತಿಭಟನೆಗಳು ಮುಂದುವರಿಯುತ್ತಿರುವ ನಡುವೆಯೇ, ಪರೀಕ್ಷಾ ಅಕ್ರಮಗಳಿಗೆ ಕಡಿವಾಣ ಹಾಕಲು ಕೇಂದ್ರ ಸರ್ಕಾರ ಕಠಿಣಾತಿಕಠಿಣ ಕಾನೂನು ತರಲು ಸಜ್ಜಾಗಿದೆ.

ಈ ಪ್ರಸ್ತಾವಿತ ಕಾನೂನಿನ ಮೂಲಕ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳನ್ನ ಮೂರು ತಿಂಗಳೊಳಗೆ ಇತ್ಯರ್ಥಗೊಳಿಸುವ ವಿಶೇಷ ನ್ಯಾಯಾಂಗ ವ್ಯವಸ್ಥೆಯನ್ನು (ಫಾಸ್ಟ್ ಟ್ರ್ಯಾಕ್ ಕೋರ್ಟ್ ವ್ಯವಸ್ಥೆ) ಜಾರಿಗೆ ತರುವ ಹಾಗೂ 10 ಕೋಟಿ ರೂ.ವರೆಗೆ ದಂಡ ವಿಧಿಸುವ ಉದ್ದೇಶವಿದೆ. ಇದರ ಮೂಲಕ ತ್ವರಿತ ನ್ಯಾಯ ಒದಗಿಸಿ, ದೇಶದ ಪರೀಕ್ಷಾ ವ್ಯವಸ್ಥೆಯ ವಿಶ್ವಾಸಾರ್ಹತೆಯನ್ನ ಮತ್ತಷ್ಟು ಬಲಪಡಿಸುವ ಗುರಿಯನ್ನು ಕೇಂದ್ರ ಸರ್ಕಾರ ಹೊಂದಿದೆ ಎಂದು ತಿಳಿದುಬಂದಿದೆ.

**10 ವರ್ಷ ಜೈಲು, 10 ಕೋಟಿವರೆಗೆ ದಂಡ:** ಪ್ರಸ್ತಾವಿತ ಹೊಸ ಕಾನೂನಿನ ಅನ್ವಯ ಪ್ರಶ್ನೆಪತ್ರಿಕೆ ಸೋರಿಕೆ ಜಾಲದಲ್ಲಿ ಭಾಗಿಯಾಗುವವರ ವಿರುದ್ಧ ಅತ್ಯಂತ ಕಠಿಣ ಶಿಕ್ಷೆಯನ್ನೂ ಪ್ರಸ್ತಾಪಿಸಲಾಗಿದೆ. ತಪ್ಪಿತಸ್ಥರೆಂದು ಸಾಬೀತಾದವರಿಗೆ ಗರಿಷ್ಠ 10 ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸುವ ಜೊತೆಗೆ 10 ಕೋಟಿ ರೂ.ವರೆಗೆ ದಂಡ ವಿಧಿಸುವ ಅವಕಾಶ ಕಲ್ಪಿಸಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ. ಇದು ಸಂಘಟಿತ ಪರೀಕ್ಷಾ ಅಕ್ರಮಗಳ ವಿರುದ್ಧದ ಅತ್ಯಂತ ಕಠಿಣ ಕಾನೂನುಗಳಲ್ಲಿ ಒಂದಾಗಲಿದೆ ಎನ್ನಲಾಗುತ್ತಿದೆ.

ನೀಟ್-ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಖಂಡಿಸಿ ದೇಶದ ಹಲವು ಭಾಗಗಳಲ್ಲಿ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸುತ್ತಿದ್ದು, ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಹಾಗೂ ಹೊಣೆಗಾರಿಕೆ ಹೆಚ್ಚಿಸುವಂತೆ ಒತ್ತಾಯಿಸುತ್ತಿದ್ದಾರೆ. ಇದರ ಮಧ್ಯೆಯೇ ಪ್ರಧಾನಿ ಮೋದಿ ಅವರ ನೇತೃತ್ವದಲ್ಲಿ ಕ್ಯಾಬಿನೆಟ್ ಸಭೆ ನಡೆದಿದ್ದು, ಕಠಿಣಾತಿಕಠಿಣ ಕಾನೂನು ತರಲು ಸರ್ಕಾರ ಮುಂದಾಗಿದೆ.

**1** ನೀಟ್ ಪರೀಕ್ಷಾ ಅಕ್ರಮ ಬ್ರೇಕ್ ಹಾಕಿ ಎಂದ ಸುಪ್ರೀಂ

**2** ಪರೀಕ್ಷಾ ವ್ಯವಸ್ಥೆ ಕಂಪ್ಯೂಟರ್ ಆಧಾರಿತ ವ್ಯವಸ್ಥೆ


**3** ಸೂಕ್ಷ್ಮವಾಗಿ ಗಮನಿಸುತ್ತಿರುತ್ತೇವೆ ಎಂದು ಕೇಂದ್ರ ಕಾರ್ಯವೈಖರಿ ಪ್ರಶ್ನಿಸಿದ ಪೀಠ.

**ದೆಹಲಿಯಲ್ಲಿ ಭುಗಿಲೆದ್ದ ಆಕ್ರೋಶ , ಹಿಂಸಾಚಾರ:** ಒಂದೆಡೆ ಸುಪ್ರೀಂಕೋರ್ಟ್‌ನಲ್ಲಿ ವಿಚಾರಣೆ ನಡೆಯುತ್ತಿದ್ದರೆ, ಇನ್ನೊಂದೆಡೆ ನೀಟ್ ಅಕ್ರಮ ಖಂಡಿಸಿ ದೆಹಲಿಯ ಜಂತರ್ ಮಂತರ್‌ನಲ್ಲಿ ಕಾಕ್ರೋಚ್ ಜನತಾ ಪಾರ್ಟಿ ನೇತೃತ್ವದಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಂಡಿದೆ. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕೆಂದು ಪ್ರತಿಭಟನಾಕಾರರು ಆಗ್ರಹಿಸುತ್ತಿದ್ದಾರೆ.ಈ ವಾರದ ಆರಂಭದಲ್ಲಿ ಸಿಜೆಪಿ ಕಾರ್ಯಕರ್ತರು ಸಂಸತ್ ಭವನದತ್ತ ಹಮ್ಮಿಕೊಂಡಿದ್ದ 'ಚಲೋ ಸಂಸತ್' ಚಳುವಳಿ ಹಿಂಸಾಚಾರಕ್ಕೆ ತಿರುಗಿತು.



ಪರಿಸ್ಥಿತಿ ನಿಯಂತ್ರಿಸಲು ದೆಹಲಿ ಪೊಲೀಸರು ಅಶ್ರುವಾಯು ಸಿಡಿಸಿ, ಲಾಠಿಚಾರ್ಜ್ ನಡೆಸಿದರು. ಘಟನೆಯಲ್ಲಿ ಪೊಲೀಸರು ಮತ್ತು ಪ್ರತಿಭಟನಾಕಾರರು ಗಾಯಗೊಂಡಿದ್ದಾರೆ.

ಪೊಲೀಸರು ನಮ್ಮ ಮೇಲೆ ದೌರ್ಜನ್ಯವೆಸಗಿದ್ದಾರೆ ಎಂದು ವಿದ್ಯಾರ್ಥಿಗಳು ಆರೋಪಿಸಿದರೆ, ಕಾನೂನು ಸುವ್ಯವಸ್ಥೆ ಕಾಪಾಡಲು ಮಾತ್ರ ನಾವು ಬಲಪ್ರಯೋಗ ಮಾಡಿದ್ದೇವೆ ಎಂದು ಪೊಲೀಸರು ಸಮರ್ಥಿಸಿಕೊಂಡಿದ್ದಾರೆ.





## ಪರೀಕ್ಷಾ ಅಕ್ರಮ ತಡೆ : ಸಂಪುಟ ಅಂಕಿತ

ಕೇಂದ್ರ ಸಚಿವರಾದ ಜಗತ್ ಪ್ರಕಾಶ್ ನಡ್ಡಾ ಹಾಗೂ ಜಿತೇಂದ್ರ ಸಿಂಗ್ ಅವರು ಸಿಜೆಪಿ ವಕ್ತಾರರಾದ ಅಶುತೋಷ್ ರಾಂಕಾ ಮತ್ತು ಸೌರವ್‌ದಾಸ್ ಅವರೊಂದಿಗೆ ನವದೆಹಲಿಯ ತಟಸ್ಥ ಸ್ಥಳವಾದ ಕಾನ್‌ಸ್ಟಿಟ್ಯೂಷನ್ ಕ್ಲಬ್‌ನಲ್ಲಿ ಸಭೆ ನಡೆಸಿ ಚರ್ಚಿಸಿದರು. ವಿರೋಧೀ ಕಾಯ್ದೆಗೆ ತಿದ್ದುಪಡಿ ಸಾರ್ವಜನಿಕ ಪರೀಕ್ಷೆಗಳ (ಅಕ್ರಮ ತಡೆ) ಕಾಯ್ದೆ ೨೦೨೪ಕ್ಕೆ ಪ್ರಸ್ತಾವಿತ ತಿದ್ದುಪಡಿಗಳನ್ನು ತರಲು ಕೇಂದ್ರ ಸಚಿವ ಸಂಪುಟ ಅಂಕಿತ ಹಾಕಿದೆ.

"ಸುಮಾರು ಎರಡು ಗಂಟೆಗಳ ಕಾಲ ಅವರೊಂದಿಗೆ ಮಾತುಕತೆ ನಡೆಯಿತು. ಅವರು ಮೂರು ಪ್ರಮುಖ ಬೇಡಿಕೆಗಳು ಮತ್ತು ಪರೀಕ್ಷೆಗಳಿಗೆ ಐದು ಸುಧಾರಣಾ ಸಲಹೆಗಳನ್ನು ನೀಡಿದ್ದಾರೆ. ಅವರನ್ನು ಮತ್ತೆ ಭೇಟಿ ಮಾಡಿ ಸರ್ಕಾರ ನಡೆಸಿದ ಚರ್ಚೆಯ ಬಗ್ಗೆ ತಿಳಿಸುತ್ತೇವೆ ಎಂದು ಅವರಿಗೆ ಹೇಳಿದ್ದೇವೆ ಎಂದರು.




ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ವಿರೋಧಿಸಿ ವಿದ್ಯಾರ್ಥಿಗಳು ನಡೆಸುತ್ತಿರುವ ಪ್ರತಿಭಟನೆಗಳ ನಡುವೆಯೇ ಕೇಂದ್ರ ಶಿಕ್ಷಣ ಇಲಾಖೆಯಲ್ಲಿ ಮಹತ್ವದ ಬದಲಾವಣೆಯಾಗಿದ್ದು, ಶಿಕ್ಷಣ ಇಲಾಖೆ ಕಾರ್ಯದರ್ಶಿ ಎತ್ತಂಗಡಿ ಮಾಡಲಾಗಿದೆ. ನೀಟ್-ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ವಿರುದ್ಧ ದೆಹಲಿಯ ಜಂತರ್ ಮಂತರ್‌ನಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ ತೀವ್ರಗೊಂಡಿರುವ ನಡುವೆಯೇ ಕೇಂದ್ರ ಸರ್ಕಾರ ಶಿಕ್ಷಣ ಇಲಾಖೆಯಲ್ಲಿ ಮಹತ್ವದ ಆಡಳಿತಾತ್ಮಕ ಬದಲಾವಣೆ ಮಾಡಿದೆ. ಶಿಕ್ಷಣ ಕಾರ್ಯದರ್ಶಿ ವಿನೀತ್ ಜೋಶಿ ಅವರನ್ನು ಹುದ್ದೆಯಿಂದ ವರ್ಗಾವಣೆ ಮಾಡಲಾಗಿದ್ದು, ಅವರ ಸ್ಥಾನಕ್ಕೆ ಹಿರಿಯ ಐಎಎಸ್ ಅಧಿಕಾರಿ ನರೇಶ್ ಪಾಲ್ ಗಂಗ್ವಾರ್ ಅವರನ್ನು ನೇಮಕ ಮಾಡಲಾಗಿದೆ.

## ಶಿಕ್ಷಣ ಇಲಾಖೆ ಕಾರ್ಯದರ್ಶಿ ಎತ್ತಂಗಡಿ

ಕೇಂದ್ರ ಸಚಿವ ಸಂಪುಟದ ನೇಮಕಾತಿ ಸಮಿತಿ ಹೊರಡಿಸಿರುವ ಆದೇಶದ ಪ್ರಕಾರ, ವಿನೀತ್ ಜೋಶಿ ಅವರನ್ನು ತಕ್ಷಣದಿಂದಲೇ ಶಿಕ್ಷಣ ಕಾರ್ಯದರ್ಶಿ ಹುದ್ದೆಯಿಂದ ಬಿಡುಗಡೆಗೊಳಿಸಲಾಗಿದ್ದು, ಶಿಕ್ಷಣ ಸಚಿವಾಲಯದ ಹೊಸ ಕಾರ್ಯದರ್ಶಿಯಾಗಿ ನರೇಶ್ ಪಾಲ್ ಗಂಗ್ವಾರ್ ಅಧಿಕಾರವಹಿಸಿಕೊಳ್ಳಲಿದ್ದಾರೆ.

## ಕಾಳಸಂತೆಯಲ್ಲಿ ಅನ್ನಭಾಗ್ಯ ಅಕ್ಕಿ ಮಾರಾಟಕ್ಕೆ ಬ್ರೇಕ್ ಹಾಕಲು ಮುಂದಾದ ರಾಜ್ಯ ಸರ್ಕಾರ: ಗ್ಯಾರಂಟಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಹತ್ವದ ನಿರ್ಧಾರ

• ಉದಯವಾಹಿನಿ, ಬೆಂಗಳೂರು

ಕಾಳಸಂತೆಯಲ್ಲಿ ರಾಜ್ಯ ಸರ್ಕಾರದ ಪ್ರಮುಖ ಯೋಜನೆಯಾದ ಅನ್ನಭಾಗ್ಯದ ಅಕ್ಕಿಯ ಮಾರಾಟ ಸರ್ಕಾರಕ್ಕೆ ತಲೆನೋವಾಗಿ ಮಾರ್ಪಟ್ಟಿದ್ದು, ಶತಾಯ ಗತಾಯ ಇದಕ್ಕೆ ಕಡಿವಾಣ ಹಾಕಲು ಮುಂದಾಗಿದೆ. ಈಗಾಗಲೇ 1,493 ಪ್ರಕರಣಗಳನ್ನು ದಾಖಲಿಸಿ, ಸುಮಾರು 50 ಕೋಟಿ ರೂಪಾಯಿ ಮೌಲ್ಯದ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದೆಯಾದರೂ ಕಾಳಸಂತೆ ಜಾಲ ಇನ್ನೂ ಸಕ್ರಿಯವಾಗಿಯೇ ಇರುವ ಕಾರಣ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ಬಗ್ಗೆ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ.

ಅಕ್ಕಿ ಕಳ್ಳಸಾಗಣೆಗೆ ತಡೆ ಹಾಕಲು ಸರ್ಕಾರ ತಂತ್ರಜ್ಞಾನದ ಮೊರೆ ಹೋಗಲು ನಿರ್ಧರಿಸಿದೆ. ನ್ಯಾಯಬೆಲೆ ಅಂಗಡಿಗಳಲ್ಲಿ ತೂಕದ ಮೋಸ ತಪ್ಪಿಸಲು ಸಿಸಿಟಿವಿ ಅಳವಡಿಕೆ, ಕಮಾಂಡ್ ಸೆಂಟರ್ ಮೂಲಕ ಅನ್ನಭಾಗ್ಯ ಅಕ್ಕಿ ಸಾಗಿಸುವ ಲಾರಿಗಳ ರಿಯಲ್ ಟೈಮ್ ಮಾನಿಟರಿಂಗ್, ಯಾವ ಲಾರಿ ಅಂಗಡಿಗೆ ಹೋಗುತ್ತಿದೆ, ಮಧ್ಯದಲ್ಲಿ ಮಾರ್ಗ ಬದಲಿಸುತ್ತಿದೆಯೇ ಎನ್ನುವುದನ್ನೂ ಪರಿಶೀಲಿಸುವ ವ್ಯವಸ್ಥೆ ಜಾರಿಯಾಗಲಿದೆ. ಫಲಾನುಭವಿಗಳಿಗೆ ಇನ್ನಷ್ಟು ಅನುಕೂಲವಾಗುವಂತೆ ನ್ಯಾಯಬೆಲೆ ಅಂಗಡಿಗಳ ಕಾರ್ಯಾವಧಿಯಲ್ಲೂ ಮಹತ್ವದ ಬದಲಾವಣೆ ತರಲು ನಿರ್ಧರಿಸಲಾಗಿದೆ.

ಬೆಳಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಅಂಗಡಿಗಳು ತೆರೆದಿರಲಿದ್ದು, ಫಲಾನುಭವಿಗಳು ತಮ್ಮ ಅನುಕೂಲದ ವೇಳೆಯಲ್ಲಿ ಅಕ್ಕಿ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಇದೇ ವೇಳೆ ಕಾಂಗ್ರೆಸ್ ಸರ್ಕಾರದ ಮತ್ತೊಂದು ಮಹತ್ವದ ಭರವಸೆಯಾಗಿರುವ ಇಂದಿರಾ ಕಿಟ್ ಯೋಜನೆಯ ಟೆಂಡರ್ ಪ್ರಕ್ರಿಯೆ ಮುಕ್ತಾಯದ ಹಂತದಲ್ಲಿದ್ದು,



ಮುಂದಿನ ಎರಡು-ಮೂರು ತಿಂಗಳೊಳಗೆ ಕಿಟ್ ವಿತರಣೆ ಆರಂಭವಾಗಲಿದೆ ಎಂದು ಸಚಿವ ಮುನಿಯಪ್ಪ ತಿಳಿಸಿದ್ದಾರೆ. ಈ ಕಿಟ್‌ಗಳಿಂದ ಜನರಿಗೆ ಪೌಷ್ಟಿಕ ಆಹಾರ ತಲುಪಲಿದೆ ಎಂಬ ವಿಶ್ವಾಸವನ್ನೂ ಅವರು ವ್ಯಕ್ತಪಡಿಸಿದ್ದಾರೆ.

ಅನ್ನಭಾಗ್ಯ ಯೋಜನೆಯ ಕುರಿತು ಈ ವೇಳೆ ಮಾತನಾಡಿದ ಸಚಿವರು, ಸರ್ಕಾರ ಆರಂಭದಲ್ಲಿ ಹತ್ತು ಕೆಜಿ ಅಕ್ಕಿ ನೀಡುವುದಾಗಿ ಘೋಷಿಸಿತ್ತು. ಆದರೆ ಕೇಂದ್ರದಿಂದ ಅಗತ್ಯ ಪ್ರಮಾಣದ ಅಕ್ಕಿ ಸಿಗದ ಕಾರಣ ಐದು ಕೆಜಿ ಅಕ್ಕಿ ಹಾಗೂ ಉಳಿದ ಮೊತ್ತವನ್ನು ನಗದು ರೂಪದಲ್ಲಿ ನೀಡಲಾಗುತ್ತಿತ್ತು. ಬಳಿಕ ಪರಿಸ್ಥಿತಿಗೆ ಅನುಗುಣವಾಗಿ ಮೂರು ಕೆಜಿ ಅಕ್ಕಿ, ಎರಡು ಕೆಜಿ ರಾಗಿ ನೀಡಲಾಗುತ್ತಿದ್ದು, ಉತ್ತರ ಕರ್ನಾಟಕ ಭಾಗದಲ್ಲಿ ಜೋಳ ವಿತರಿಸುವ ಯೋಜನೆಯೂ ಸರ್ಕಾರದ ಮುಂದಿದೆ ಎಂದು ತಿಳಿಸಿದ್ದಾರೆ.

## ಮಳೆರಾಯನ ಮುನಿಸು: KRS ನೀರಿನ ಮಟ್ಟ ಕುಸಿತ; ಮಂಡ್ಯದಲ್ಲಿ ಕೃಷಿ ಚಟುವಟಿಕೆ ಸಂಪೂರ್ಣ ಸ್ತಬ್ಧ

• ಉದಯವಾಹಿನಿ, ಬೆಂಗಳೂರು

ಜಿಲ್ಲೆಯಲ್ಲಿ ಮಳೆರಾಯನ ಮುನಿಸು ಮುಂದುವರಿದಿದೆ. ಮುಂಗಾರು ಶುರುವಾಗಿ ಜುಲೈ ಕಳೆಯುತ್ತಾ ಬಂದರೂ ಒಂದು ಹನಿ ಮಳೆಯಿಲ್ಲದೆ ಮಂಡ್ಯದ ರೈತರು ಕಂಗಾಲಾಗಿದ್ದಾರೆ. ಜಮೀನುಗಳು ಹಚ್ಚಹಸಿರಿನಿಂದ ಕಂಗೊಳಿಸಬೇಕಿದ್ದ ಸಮಯದಲ್ಲಿ ಒಣಭೂಮಿಯಾಗಿ ಮಾರ್ಪಟ್ಟಿವೆ. ಇತ್ತ ಕೆಆರ್‌ಎಸ್ ಜಲಾಶಯದಲ್ಲೂ ನೀರಿನ ಮಟ್ಟ ಕುಸಿದಿದ್ದು, ಕೃಷಿಗೆ ನೀರಿಲ್ಲದೆ ಬಿತ್ತನೆ ಕಾರ್ಯ ಸಂಪೂರ್ಣ ಸ್ತಬ್ಧಗೊಂಡಿದೆ. ಮಂಡ್ಯ ಅಂದರೆ ನೆನಪಾಗುವುದು ಹಚ್ಚಹಸಿರಿನ ಕಬ್ಬಿನ ಗದ್ದೆಗಳು.

ಆದರೆ ಈ ಬಾರಿ ಪರಿಸ್ಥಿತಿ ತದ್ವಿರುದ್ಧವಾಗಿದೆ. ಕಾವೇರಿ ಮಡಿಲಲ್ಲಿ ಮಳೆರಾಯನ ಕೃಪೆಯಿಲ್ಲದೆ ಕೃಷಿ ಚಟುವಟಿಕೆಗಳು ಸಂಪೂರ್ಣ ಸ್ತಬ್ಧಗೊಂಡಿವೆ. ಜುಲೈ ತಿಂಗಳಲ್ಲಿ ಆರ್ಭಟಿಸಬೇಕಿದ್ದ ಮುಂಗಾರು ಮಳೆ ಸಂಪೂರ್ಣ ಕೈಕೊಟ್ಟಿದ್ದು, ಮಂಡ್ಯ ಜಿಲ್ಲೆಯಲ್ಲಿ ಬರೋಬ್ಬರಿ 83% ಮಳೆ ಕೊರತೆ ಎದುರಾಗಿದೆ.

ಇದರಿಂದ ಜಮೀನಿನಲ್ಲಿ ಉಳುಮೆ ಮಾಡುವುದಕ್ಕೂ ತೇವಾಂಶ ಇಲ್ಲದಂತಾಗಿದ್ದು, ರೈತರು ಆಗಸದತ್ತ ಮುಖ ಮಾಡಿ ಕುಳಿತುಕೊಳ್ಳುವಂತಾಗಿದೆ. ಇನ್ನೊಂದೆಡೆ ಜೀವನಾಡಿ ಕೆಆರ್‌ಎಸ್ ಜಲಾಶಯದ ಸ್ಥಿತಿ ಕೂಡ ಶೋಚನೀಯವಾಗಿದೆ. ಡ್ಯಾಂನಲ್ಲಿ ಸದ್ಯಕ್ಕೆ ಇರುವುದು ಕೇವಲ 92 ಅಡಿ ನೀರು ಮಾತ್ರ. ಇದರಲ್ಲಿ ಕೇವಲ 12 ಟಿಎಂಸಿ ನೀರು ಮಾತ್ರ ಬಳಕೆಗೆ ಲಭ್ಯವಿದೆ. ಹೀಗಾಗಿ ಸರ್ಕಾರ ಲಭ್ಯವಿರುವ ನೀರನ್ನು ಕೇವಲ ಕುಡಿಯುವ



ಉದ್ದೇಶಕ್ಕೆ ಮಾತ್ರ ಕಾಯ್ದಿರಿಸಿದ್ದು, ಆಣೆಕಟ್ಟೆಯಿಂದ ಕೃಷಿಗೆ ನೀರು ಹರಿಸುವುದಿಲ್ಲ ಎಂದು ತಿಳಿಸಲಾಗಿದೆ. ಪರಿಣಾಮ ಕಾಲುವೆ ನಂಬಿಕೊಂಡಿದ್ದ ರೈತರಿಗೆ ಬಿತ್ತನೆ ಮಾಡಲಾಗದೆ ದೊಡ್ಡ ಹೊಡೆತ ಬಿದ್ದಿದೆ. ಜಿಲ್ಲೆಯಲ್ಲಿ ಈ ಬಾರಿ 2 ಲಕ್ಷದ 6 ಸಾವಿರ ಹೆಕ್ಟೇರ್ ಕೃಷಿ ಗುರಿ ಹೊಂದಲಾಗಿತ್ತು.

ಆದರೆ, ಈವರೆಗೆ ಬಿತ್ತನೆಯಾಗಿರುವುದು ಕೇವಲ 18 ಸಾವಿರ ಹೆಕ್ಟೇರ್ ಮಾತ್ರ. ಅಂದರೆ ಶೇಕಡಾ 9 ರಷ್ಟು ಮಾತ್ರ. ಮಂಡ್ಯ ಜಿಲ್ಲೆಯ ಎಲ್ಲಾ 7 ತಾಲ್ಲೂಕುಗಳಲ್ಲಿ ಈಗ ಬರದ ಛಾಯೆ ಆವರಿಸಿದೆ. ಮಳೆ ಇಲ್ಲ, ನದಿ ನೀರೂ ಸಿಗದೇ ರೈತರು ಸಂಕಷ್ಟಕ್ಕೀಡಾಗಿದ್ದಾರೆ. ಹೀಗಾಗಿ ಮಂಡ್ಯ ಜಿಲ್ಲೆಯನ್ನ ಬರ ಪೀಡಿತ ಎಂದು ಘೋಷಿಸಿ ಪರಿಹಾರ ನೀಡಬೇಕು ಎಂದು ರೈತರು ಸರ್ಕಾರವನ್ನು ಆಗ್ರಹಿಸಿದ್ದಾರೆ

## ಬೆಂಗಳೂರಿನಾಚೆಗೂ ಉದ್ಯಮ ವಿಸ್ತರಿಸಲು ಹೊಸ ನೀತಿ ರೂಪಿಸಲಾಗುವುದು: ಸಿಎಂ ಡಿಕೆಶಿ

### ಅಭಿವೃದ್ಧಿ ಕೇವಲ ಬೆಂಗಳೂರಿಗೆ ಸೀಮಿತವಾಗಬಾರದು. ಬೆಂಗಳೂರು ನಮ್ಮ ಕಿರೀಟವಾದರೆ, ಕರ್ನಾಟಕ ನಮ್ಮ ಹೃದಯ

• ಉದಯವಾಹಿನಿ, ಬೆಂಗಳೂರು

ಮುಂಬರುವ 100 ದಿನಗಳೊಳಗೆ ಬೆಂಗಳೂರಿನಿಂದ ಆಚೆಗೂ ಕೈಗಾರಿಕೆಗಳು ತಮ್ಮ ಕಾರ್ಯಾಚರಣೆಯನ್ನು ವಿಸ್ತರಿಸಲು ಪ್ರೋತ್ಸಾಹಿಸುವ ಹೊಸ ನೀತಿ ರೂಪಿಸಲಾಗುವುದು ಎಂದು ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರು ಟೆಕ್ ಸಮಿಟ್ ಹಿನ್ನೆಲೆಯಲ್ಲಿ ಇಂದು ಸಿಇಒಗಳ ಜೊತೆಗಿನ ಉಪಹಾರ ಕೂಟದ ಸಭೆಯಲ್ಲಿ ಮಾತನಾಡಿದ ಸಿಎಂ, ಬಿಯಾಂಡ್ ಬೆಂಗಳೂರು ಮೂಲಕ ಉದ್ಯಮ ಮಾಡುವ ವೆಚ್ಚವನ್ನು ಮತ್ತಷ್ಟು ಕಡಿಮೆ ಮಾಡುವ ಸಂಕಲ್ಪ ಮಾಡಿದ್ದೇವೆ. ಮುಂಬರುವ 100 ದಿನಗಳ ಒಳಗೆ, ಬೆಂಗಳೂರಿನಿಂದ ಆಚೆಗೂ ಕೈಗಾರಿಕೆಗಳು ತಮ್ಮ ಕಾರ್ಯಾಚರಣೆಯನ್ನು ವಿಸ್ತರಿಸಲು ಪ್ರೋತ್ಸಾಹಿಸುವ ಹೊಸ ನೀತಿಯನ್ನು ಸರ್ಕಾರ ತರಲಿದೆ. ಇದರಲ್ಲಿ ಕರ್ನಾಟಕದ ಇತರ ನಗರಗಳಲ್ಲಿ ಅತ್ಯಂತ ಕಡಿಮೆ ದರದಲ್ಲಿ ಅಂದರೆ ಪ್ರತಿ ಚದರ ಅಡಿಗೆ ಕೇವಲ 'ಫಿಫ್ಟಿ ಸೆಂಟ್ಸ್' ನಷ್ಟು ಅಗ್ಗದ ದರದಲ್ಲಿ ವಿಶ್ವದರ್ಜೆಯ ಕಚೇರಿ ಮೂಲಸೌಕರ್ಯಗಳನ್ನು ಒದಗಿಸಲಾಗುವುದು ಎಂದರು. ನಮ್ಮ ರಾಜ್ಯದ ಸಾಫ್ಟ್‌ವೇರ್ ರಫ್ತು 2024-25ನೇ ಸಾಲಿನಲ್ಲಿ 4.36 ಲಕ್ಷ




ಕೋಟಿಯಷ್ಟಿದೆ. ಈ ವರ್ಷ ಅದು 5.50 ಲಕ್ಷ ಕೋಟಿ ಮುಟ್ಟುವ ನಿರೀಕ್ಷೆ ಇದೆ. ವಿದೇಶಿ ಹೂಡಿಕೆದಾರರು ಮುಂಬೈನಲ್ಲಿ ಉದ್ಯಮ ಮಾಡಲು 3.5 ಡಾಲರ್ ವೆಚ್ಚ ಮಾಡಿದರೆ, ಕರ್ನಾಟಕದಲ್ಲಿ ಉದ್ಯಮ ಮಾಡಲು ಕೇವಲ 1 ಡಾಲರ್ ವೆಚ್ಚ ಮಾಡಬಹುದಾಗಿದೆ. ಬಿಯಾಂಡ್ ಬೆಂಗಳೂರು ಮೂಲಕ ಈ ವೆಚ್ಚವನ್ನು ಮತ್ತಷ್ಟು ಕಡಿಮೆ ಮಾಡುವ ಸಂಕಲ್ಪ ಮಾಡಿದ್ದೇವೆ. ರಾಜ್ಯದ ಇತರೆ ನಗರಗಳಿಗೆ ಉದ್ಯಮಗಳನ್ನು ವಿಸ್ತರಿಸಿ ಕೇವಲ ಅರ್ಧ ಡಾಲರ್ ವೆಚ್ಚ ಆಗುವಂತೆ ಮಾಡುವ ಗುರಿ ಹೊಂದಿದ್ದೇವೆ ಎಂದು ತಿಳಿಸಿದರು.ಇದಕ್ಕಾಗಿ ಹುಬ್ಬಳ್ಳಿ, ಧಾರವಾಡ, ಮೈಸೂರು ಸೇರಿದಂತೆ ಎರಡು ಹಾಗೂ ಮೂರನೇ ಹಂತದ ನಗರಗಳಲ್ಲಿ ಎರಡು ಪಟ್ಟು ಎಫ್‌ಎಆರ್ ನೀಡಲು ತೀರ್ಮಾನಿಸಿದ್ದೇವೆ. ಈ ನಗರಗಳಲ್ಲೂ ನಾವು ನಿಮಗೆ ಅತ್ಯುತ್ತಮ ಮೂಲಸೌಕರ್ಯ ಒದಗಿಸುತ್ತೇವೆ. ವಿಶ್ವದರ್ಜೆಯ ಪ್ರತಿಭೆಗಳು, ನಿಮ್ಮ ಸಮಸ್ಯೆಗಳಿಗೆ ಪರಿಹಾರ ನೀಡಲಿದ್ದೇವೆ. ನಾವು ಸುದೀರ್ಘ ಕಾಲದ ಸಂಬಂಧ ಹೊಂದಲು ಬಯಸುತ್ತೇವೆ. ಇದಕ್ಕಾಗಿ ನಾವು ನೀತಿ ರೂಪಿಸುತ್ತಿದ್ದೇವೆ. ಬೆಂಗಳೂರಿನಲ್ಲಿರುವ ಪ್ರತಿಭಾನ್ವಿತ ಮಾನವ ಸಂಪನ್ಮೂಲ ಬೇರೆ ಎಲ್ಲೂ ಇಲ್ಲ ಎಂದು ತಿಳಿಸಿದರು.

ನಮ್ಮ ಐಟಿ ನೀತಿಯನ್ನು ಡೀಪ್ ಟೆಕ್ ಮೇಲೆ ನಿರ್ಮಿಸಲಾಗಿದೆ. ಕರ್ನಾಟಕದ ಕ್ವಾಂಟಮ್ ನೀತಿ ಜಾಗತಿಕ ಮಟ್ಟದಲ್ಲಿ ಸದ್ದು ಮಾಡುತ್ತಿದೆ. ಎಐ, ರೋಬಾಟಿಕ್ಸ್, ಸುಸ್ಥಿರ ಮೂಲಸೌಕರ್ಯ ನಮ್ಮ ಮುಂದಿನ ಗುರಿ. ಈ ಕ್ಷೇತ್ರಗಳು ಮುಂದಿನ ದಶಕಗಳನ್ನು ಆಳಲಿವೆ. ನಮ್ಮ ಸರ್ಕಾರ ಎಐ ವಿವಿ ಸ್ಥಾಪಿಸಲು ನಿರ್ಧರಿಸಿದೆ. ನಮ್ಮ ಎಐ ನಗರ ಉದ್ಯಮಗಳ ಜೊತೆ ಪಾಲುದಾರಿಕೆ ಹೊಂದಲಿದೆ. ಕಲಿಕೆ, ಸಂವಹನ ಹಾಗೂ ಸಾರ್ವಜನಿಕ ಸೇವೆಗೆ ಎಐ ಬಳಸಲು ಮುಂದಾಗಿದ್ದೇವೆ. 6ನೇ ತರಗತಿಯಿಂದ ಮಕ್ಕಳು ಎಐ ಅನ್ನು ಪಠ್ಯಕ್ರಮದ ಭಾಗವಾಗಿ ಕಲಿಯಲಿದ್ದಾರೆ ಎಂದರು.ನಮ್ಮ ಸರ್ಕಾರ ಬೆಂಗಳೂರು ರೋಬಾಟಿಕ್ಸ್ ಅಂಡ್ ಎಐ ಅನ್ನೋವೇಷನ್ ಜೋನ್ ಆರಂಭಿಸಲು ತೀರ್ಮಾನಿಸಿದ್ದೇವೆ ಎಂದರು.

### ಸುಸ್ಥಿರ ಡೇಟಾ ಸೆಂಟರ್ ನೀತಿ, 2026-31

ಜೊತೆಗೆ, 'ಬೆಂಗಳೂರು ರೊಬೊಟಿಕ್ಸ್ ಮತ್ತು ಇನ್ನೋವೇಶನ್ ಜೋನ್' ಹಾಗೂ ಜಮೀನು, ವಿದ್ಯುತ್, ನೀರು, ಕನೆಕ್ಟಿವಿಟಿ ಮತ್ತು ನವೀಕರಿಸಬಹುದಾದ ಇಂಧನದ ಬೆಂಬಲದೊಂದಿಗೆ ಪರಿಸರ ಸ್ನೇಹಿ ಡಿಜಿಟಲ್ ಮೂಲಸೌಕರ್ಯ ಸೃಷ್ಟಿಸುವ 'ಸುಸ್ಥಿರ ಡೇಟಾ ಸೆಂಟರ್ ನೀತಿ 2026-31' ಅನ್ನು ಸಹ ಸಿಎಂ ಇದೇ ವೇಳೆ ಘೋಷಿಸಿದರು. ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಯನ್ನು ಪ್ರತಿಪಾದಿಸಿದ ಸಿಎಂ, ಅಭಿವೃದ್ಧಿ ಕೇವಲ ಬೆಂಗಳೂರಿಗೆ ಮಾತ್ರ ಸೀಮಿತವಾಗಬಾರದು. ಬೆಂಗಳೂರು ನಮ್ಮ ಕಿರೀಟವಾದರೆ, ಕರ್ನಾಟಕ ನಮ್ಮ ಹೃದಯ. ಮೈಸೂರು, ಹುಬ್ಬಳ್ಳಿ-ಧಾರವಾಡ, ಮಂಗಳೂರು ಮತ್ತು ಬೆಳಗಾವಿ ನಗರಗಳು ಪ್ರಮುಖ ತಂತ್ರಜ್ಞಾನ ಮತ್ತು ಹೂಡಿಕೆ ತಾಣಗಳಾಗಿ ಹೊರಹೊಮ್ಮಬೇಕು.

**ಈ ದಿನದ ದರ** ಪೆಟ್ರೋಲ್: 110.44₹/L ಡೀಸೆಲ್ : 99.56₹/L ಬಂಗಾರ: ₹ 14,433/Gram 24ct ₹13,230/Gram 22ct ಬೆಳ್ಳಿ: ₹235.00/Gram

# ಬಿಜೆಪಿ ವಿರುದ್ಧ ಕೆಪಿಸಿಸಿ ದೂರು

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಪಕ್ಷದ ಅನೇಕ ಶಾಸಕರು ಹಾಗೂ ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ್ ರವರು ಒಳಗೊಂಡಂತೆ ಬಿಜೆಪಿ ಪಕ್ಷದ ಕಾರ್ಯಕರ್ತರು ಕೆಪಿಸಿಸಿ ಕಚೇರಿ ಕ್ವಿನ್ಸ್ ರಸ್ತೆ ಬಳಿ ಪ್ರತಿಭಟನೆ ನಡೆಸಲು ಉದ್ದೇಶಪೂರ್ವಕವಾಗಿ ಆಗಮಿಸಿದ ಸಂದರ್ಭದಲ್ಲಿ ಅವರ ಜೊತೆ ಬಂದಂತಹ ವಾಹನಗಳಲ್ಲಿ ಆಯುಧಗಳು ಹಾಗೂ ಮಾರಕಸ್ತ್ರಗಳು ಇರುವ ಬಗ್ಗೆ ಅವರೇ ಚರ್ಚಿಸಿರುವ ವಿಷಯದ ಕುರಿತು ಕೂಡಲೆ ತುರ್ತಾಗಿ ಅಗತ್ಯ ಕ್ರಮ ಕೈಗೊಳ್ಳಬೇಕು ಇದರ ಬಗ್ಗೆ ತನಿಖೆ ನಡೆಸಬೇಕು ಎಂದು ಕೆಪಿಸಿಸಿ ನಿಯೋಗವು ರಾಜ್ಯ ಪೊಲೀಸ್ ನಿರ್ದೇಶಕರಿಗೆ ಮನವಿ ಸಲ್ಲಿಸಿದೆ.ಹೈ ಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ಸಂಪೂರ್ಣ ಮಾಹಿತಿಯೊಂದಿಗೆ ದೂರನ್ನು ನೀಡಲಾಗಿದ್ದು , ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹಾಗೂ ಅವರ ಜೊತೆ ಬಂದಂತಹ ಬಿಜೆಪಿ ಪಕ್ಷದ ಶಾಸಕರು, ಕಾರ್ಯಕರ್ತರು ಎಲ್ಲರೂ ಕೆಪಿಸಿಸಿ ಕಚೇರಿ ಬಳಿ ಪ್ರತಿಭಟನೆಗೆ ಆಗಮಿಸಿದರು ಈ ಸಂದರ್ಭದಲ್ಲಿ ನಡೆದ ಘಟನೆ ಬಗ್ಗೆ ಈಗಾಗಲೇ ಪ್ರತ್ಯೇಕವಾಗಿ ದೂರುಗಳನ್ನು ಸಲ್ಲಿಸಲಾಗಿದೆ.

# ಎಸ್ಐಆರ್ ನಿರ್ವಹಣೆ: ಕೇಂದ್ರ ವಿಫಲ- ರಾಣಿ ಸತೀಶ್

• ಉದಯವಾಹಿನಿ, ಕೆ.ಆರ್.ಪುರ

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ, ರಾಮ ಮಂದಿರ ಹಣ ದುರ್ಬಳಕೆ ಹಾಗೂ ಎಸ್ ಐ ಆರ್ ಪರಿಷ್ಕರಣೆಯನ್ನು ಸಮರ್ಪಕವಾಗಿ ನಿರ್ವಹಿಸಲು ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಮಾಜಿ ಸಚಿವೆ ಹಾಗೂ ಕೆಪಿಸಿಸಿ ಪ್ರಚಾರ ಸಮಿತಿ ಉಪಾಧ್ಯಕ್ಷೆ ರಾಣಿ ಸತೀಶ್ ಅವರು ತಿಳಿಸಿದರು.

ಕ್ಷೇತ್ರದ ದೇವಸಂದ್ರದ ಕಾಂಗ್ರೇಸ್ ಕಚೇರಿಯಲ್ಲಿ ಬೆಂಗಳೂರು ನಗರ ಪೂರ್ವ ಜಿಲ್ಲಾ ಕಾಂಗ್ರೇಸ್ ಪ್ರಚಾರ ಸಮಿತಿ ಮತ್ತು ಬೆಂಗಳೂರು ಪೂರ್ವ ಜಿಲ್ಲಾಧ್ಯಕ್ಷ ಡಿಕೆ ಮೋಹನ್ ಬಾಬು ನೇತೃತ್ವದಲ್ಲಿ ಏರ್ಪಡಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳ ಮೇಲಿನ ಲಾಠಿ ಚಾರ್ಜ್ ಖಂಡನೀಯ, ಪ್ರಶ್ನೆ ಪತ್ರಿಕೆಯ ಸೋರಿಕೆಯ ಪ್ರಮುಖ ಆರೋಪಿಗಳು ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿದ ಅಧಿಕಾರಿಗಳ ವಿರುದ್ದ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು. ಕೇಂದ್ರ ಸರ್ಕಾರ ನೀಟ್ ಪರೀಕ್ಷೆಯನ್ನು ಸರಿಯಾದ ರೀತಿಯಲ್ಲಿ ಮಾಡಲು ವಿಫಲವಾಗಿದೆ, ಶಿಕ್ಷಣ ವಿಚಾರದಲ್ಲಿ 152 ಪತ್ರಿಕೆಗಳ ಲೀಕ್‌ಗೆ ಸೂಕ್ತ ಕ್ರಮಗಳನ್ನು ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜಿಬಿಎ ಬೆ. ಪೂರ್ವ ಜಿಲ್ಲಾಧ್ಯಕ್ಷ ಡಿ.ಕೆ.ಮೋಹನ್ ಬಾಬು ಮಾತನಾಡಿ, ನೀಟ್ ಪರೀಕ್ಷೆಯಲ್ಲಿ ಅಕ್ರಮ ನಡೆದು 21 ಕ್ಕೂ ಹೆಚ್ಚು ವಿದ್ಯಾರ್ಥಿಗಳು ತಮ್ಮ ಪ್ರಾಣ ಕಳೆದುಕೊಂಡಿದ್ದಾರೆ. ಅವರಿಗೆ ನ್ಯಾಯ ಒದಗಬೇಕಾದರೆ ಯಾರೇ ತಪ್ಪಿತಸ್ಥರಿದ್ದರು ಅವರ ವಿರುದ್ದ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು, ಹಾಗೂ ವಿದ್ಯಾರ್ಥಿಗಳ ಮೇಲಿನ ಪ್ರಕರಣಗಳನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ಲಾಠಿ ಜಾರ್ಜ್ ಮೂಲಕ ಯುವ ಪೀಳಿಗೆಯನ್ನು ಹತ್ತಿಕ್ಕುವ ಕ್ರಯಮಾಡುತ್ತಿದೆ, ರಾಮಮಂದಿರ ಹಣ ದುರುಪಯೋಗ ವಿಚಾರದಲ್ಲಿ



ಉದಯವಾಹಿನಿ ಚಿತ್ರ

ಅಮಾಯಕರನ್ನು ಬಂಧಿಸಿದ್ದು, ಪ್ರಮುಖ ಆರೋಪಿಯನ್ನು ಬಂಧಿಸುವ ಕಾರ್ಯ ಮಾಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

## ಮಕ್ಕಳಿಗೆ ಹೊರೆಯಾಗಬಾರದೆಂದು ವೃದ್ಧ ದಂಪತಿ ಆತ್ಮಹತ್ಯೆ: ಬೆಂಗಳೂರಿನಲ್ಲಿ ಹೃದಯವಿದ್ರಾವಕ ಘಟನೆ

• ಉದಯವಾಹಿನಿ, ಬೆಂಗಳೂರು

ವಯೋಸಹಜ ಅನಾರೋಗ್ಯವಿದ್ದು ತಮ್ಮ ಪುತ್ರಿಯರಿಗೆ ತಾವು ಹೊರೆಯಾಗುತ್ತಿದ್ದೇವೆ ಎಂಬ ಆತಂಕದಿಂದ ವೃದ್ಧ ದಂಪತಿ ಆತ್ಮಹತ್ಯೆ ಮಾಡಿಕೊಂಡಿರುವ ಹೃದಯವಿದ್ರಾವಕ ಘಟನೆ ಬಸವೇಶ್ವರನಗರ ಪೊಲೀಸ್ ಠಾಣೆ ವ್ಯಾಪ್ತಿಯ ಮಂಜುನಾಥನಗರದ ಬಾಡಿಗೆ ಮನೆಯಲ್ಲಿ ನಡೆದಿದೆ. ಮೃತರನ್ನು ಈಶ್ವರಾಚಾರ್ (73ವ) ಹಾಗೂ ಅವರ ಪತ್ನಿ ಗೌರಿ (66ವ) ಎಂದು ಗುರುತಿಸಲಾಗಿದೆ. ನಿನ್ನೆ ಗುರುವಾರ ಬೆಳಗ್ಗೆ ಮಕ್ಕಳು ಪೋಷಕರಿಗೆ ಹಲವು ಬಾರಿ ಕರೆ ಮಾಡಿದರೂ ಸ್ಪಂದಿಸದ ಹಿನ್ನೆಲೆಯಲ್ಲಿ ಆತಂಕದಿಂದ ಮನೆಗೆ ಹೋಗಿ ನೋಡಿದಾಗ ಘಟನೆ ಬೆಳಕಿಗೆ ಬಂದಿದೆ. ಬಳಿಕ ಅವರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಈಶ್ವರಾಚಾರ್ ಅವರು ಹಿಂದೆ ಚಿನ್ನದ ಕೆಲಸ ಮಾಡುತ್ತಿದ್ದರು. ಪ್ರಸ್ತುತ ಉದ್ಯೋಗವಿಲ್ಲದೆ ಇದ್ದರು. ವಿಷ ಬೆರೆಸಿದ ಜ್ಯೂಸ್ ಸೇವಿಸಿ ದಂಪತಿ ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಪೊಲೀಸರು ಶಂಕಿಸಿದ್ದು, ಬುಧವಾರ ರಾತ್ರಿ ಈ ಕೃತ್ಯ ಎಸಗಿರುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

ದಂಪತಿಗೆ ಇಬ್ಬರು ಪುತ್ರಿಯರಿದ್ದು, ಇಬ್ಬರೂ ವಿವಾಹಿತರಾಗಿ ತಮ್ಮ ಕುಟುಂಬದೊಂದಿಗೆ ವಾಸಿಸುತ್ತಿದ್ದಾರೆ. ಪುತ್ರಿಯರೇ ತಮ್ಮ ವಯೋವೃದ್ಧ ಪೋಷಕರ ಆರೈಕೆ ಮಾಡುತ್ತಿದ್ದರು.

ಕೆಲವು ದಿನಗಳ ಹಿಂದೆ ಗೌರಿ ಅವರ ಸೊಂಟದ ಮೂಳೆ ಜಾರಿದ್ದರಿಂದ ಅವರು ಹಾಸಿಗೆ ಹಿಡಿದಿದ್ದರು. ಅಲ್ಲದೆ, ದಂಪತಿ ಇಬ್ಬರೂ ಮಧುಮೇಹ, ಅಧಿಕ ರಕ್ತದೊತ್ತಡ ಹಾಗೂ ಆಸ್ತಮಾ ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದರು.

ತಮ್ಮ ಪುತ್ರಿಯರ ಮೇಲೆ ಸಂಪೂರ್ಣವಾಗಿ ಅವಲಂಬಿತರಾಗಿರುವುದು ದಂಪತಿಗೆ ಮಾನಸಿಕವಾಗಿ ಬೇಸರ ಉಂಟುಮಾಡಿತ್ತು ಎಂದು ಹೇಳಲಾಗುತ್ತಿದೆ. ಆದರೆ, ಪೋಷಕರ ಆರೈಕೆ ಮಾಡುವುದಕ್ಕೆ ಮಕ್ಕಳಿಗೆ ಯಾವುದೇ ಸಮಸ್ಯೆಯಿರಲಿಲ್ಲ ಎಂದು ವಿಚಾರಿಸಿದಾಗ ಗೊತ್ತಾಯಿತು.

## ಪ್ರಜ್ವಲ್ ರೇವಣ್ಣ ಕರೆತರಲು ಕುಟುಂಬ ಯತ್ನ; ಪೆರೋಲ್ ನೀಡಲು ಸಾಧ್ಯವಿಲ್ಲ ಎಂದ ಕಾರಾಗೃಹ ಇಲಾಖೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮನೆಗೆಲಸದ ಮಹಿಳೆಯ ಮೇಲೆ ಪದೇ ಪದೇ ಅತ್ಯಾಚಾರ ಎಸಗಿದ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಅನುಭವಿಸುತ್ತಿರುವ ಹಾಸನ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರಿಗೆ ಪೆರೋಲ್ ನೀಡಲು ಸಾಧ್ಯವಿಲ್ಲ ಎಂದು ಕಾರಾಗೃಹ ಇಲಾಖೆ ಸ್ಪಷ್ಟಪಡಿಸಿದೆ.

ಇತ್ತೀಚಿಗೆ ನಿಧನರಾದ ಪ್ರಜ್ವಲ್ ರೇವಣ್ಣ ಅವರ ಅಜ್ಜಿ ಹಾಗೂ ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ ಅವರ ಪತ್ನಿ ಚೆನ್ನಮ್ಮ ಅವರ ತಿಥಿಯ ದಿನ ಪೂಜೆ ಸಲ್ಲಿಸೋದಕ್ಕೆ ಜೈಲಿನಿಂದ ಅವರನ್ನು ಕರೆತರುವುದಕ್ಕೆ ಕುಟುಂಬಸ್ಥರು ಯತ್ನಿಸುತ್ತಿದ್ದಾರೆ. ಆದರೆ ಕಾರಾಗೃಹ ಇಲಾಖೆ, ಮಾಜಿ ಸಂಸದನಿಗೆ ಪೆರೋಲ್ ನೀಡಲು ಸಾಧ್ಯವಿಲ್ಲ ಮತ್ತು ತಮ್ಮ ಅಧಿಕಾರ ವ್ಯಾಪ್ತಿಗೆ ಬರುವುದಿಲ್ಲ ಎಂದು ಹೇಳಿದೆ.

ಇದೀಗ ಪ್ರಜ್ವಲ್ ಅವರ ಕುಟುಂಬ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸುವ ಸಾಧ್ಯತೆ ಇದ್ದು, 15 ದಿನಗಳ ಕಾಲ ಪೆರೋಲ್ ಸಿಕ್ಕರೆ ಜುಲೈ 30ಕ್ಕೆ ನಿಗದಿಯಾಗಿರುವ ಅಜ್ಜಿಯ ಪುಣ್ಯ ತಿಥಿಯಲ್ಲಿ ಭಾಗವಹಿಸಲಿದ್ದಾರೆ.

ಸಜಾ ಬಂಧಿಯಾಗಿ ಜೈಲಿನಲ್ಲಿರುವ ಪ್ರಜ್ವಲ್ ರೇವಣ್ಣ ಅವರಿಗೆ ಈಗಾಗಲೇ ಕುಟುಂಬಸ್ಥರು, ಸಂಬಂಧಿಕರು ಹಾಗೂ ಸ್ನೇಹಿತರೊಂದಿಗೆ ಜೈಲಿನಲ್ಲಿ ಮಾತನಾಡಲು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಅನುಮತಿ ನೀಡಿದೆ.

ನ್ಯಾಯಾಲಯದ ಆದೇಶದಂತೆ, ಜೈಲು ಮುಖ್ಯ ಅಧೀಕ್ಷಕರು, ಕಾರಾಗೃಹ ನಿಯಮಾವಳಿಗೆ ಅನುಗುಣವಾಗಿ ಕುಟುಂಬಸ್ಥರು, ಸಂಬಂಧಿಕರು ಮತ್ತು ಸ್ನೇಹಿತರಿಗೆ ಭೇಟಿಗೆ ಅವಕಾಶ ಕಲ್ಪಿಸಬೇಕು ಎಂದು ಸೂಚಿಸಲಾಗಿದೆ.

## ಒತ್ತುವರಿ ತೆರವು ಕಾರ್ಯಾಚರಣೆ ವೇಳೆ ಕಿಡಿಗೇಡಿಗಳಿಂದ ಹಲ್ಲೆಗೊಳಗಾದ ಅಧಿಕಾರಿಗಳಿಗೆ ಸಚಿವ ಕೃಷ್ಣ ಭೈರೇಗೌಡ ಸನ್ಮಾನ

• ಉದಯವಾಹಿನಿ, ಬೆಂಗಳೂರು

ಶಿವಾಜಿನಗರದಲ್ಲಿ ಇತ್ತೀಚೆಗೆ ಬೀದಿಬದಿ ವ್ಯಾಪಾರಿಗಳ ಒತ್ತುವರಿ ತೆರವು ಕಾರ್ಯಾಚರಣೆ ವೇಳೆ ಕಿಡಿಗೇಡಿಗಳಿಂದ ಹಲ್ಲೆಗೊಳಗಾದ ಅಧಿಕಾರಿಗಳನ್ನು ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಸನ್ಮಾನಿಸಿ ಕೃತಜ್ಞತೆ ಸಲ್ಲಿಸಿದರು.

ಕರ್ತವ್ಯನಿಷ್ಠೆಯಿಂದ ತಮ್ಮ ಜವಾಬ್ದಾರಿಯನ್ನು ನಿರ್ವಹಿಸಿದ ಅಧಿಕಾರಿಗಳನ್ನು ಕೃಷ್ಣ ಬೈರೇಗೌಡ ಅವರು ತಮ್ಮ ಕಚೇರಿಯಲ್ಲಿ ಆಹ್ವಾನಿಸಿ ಸನ್ಮಾನಿಸಿದರು. ಕರ್ತವ್ಯನಿಷ್ಠೆ, ಧೈರ್ಯ ಮತ್ತು ಸಾರ್ವಜನಿಕ ಹಿತಾಸಕ್ತಿಗೆ ಬದ್ಧತೆಯಿಂದ ಸೇವೆ ಸಲ್ಲಿಸಿದ ಅಧಿಕಾರಿಗಳ ಕಾರ್ಯವನ್ನು ಸಚಿವರು ಶ್ಲಾಘಿಸಿ, ನಗರದ ಸುಗಮ ಸಂಚಾರ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಇಂತಹ ಕಾರ್ಯಾಚರಣೆಗಳು ಮುಂದುವರಿಯಲಿವೆ ಎಂದು ತಿಳಿಸಿದರು. ಶಿವಾಜಿನಗರದ ಫುಟ್‌ಪಾತ್ ಅತಿಕ್ರಮಣ ತೆರವುಗೊಳಿಸಲು ತೆರಳಿದ್ದ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರಿಗಳು ಮತ್ತು ಸಿಬ್ಬಂದಿ ಮೇಲೆ ಬೀದಿ ಬದಿ ವ್ಯಾಪಾರಿಗಳು ಹಲ್ಲೆ ನಡೆಸಿದ್ದರು.

## ಎಸ್ಐಆರ್ ಕರ್ತವ್ಯದಲ್ಲಿದ್ದ ಸರ್ಕಾರಿ ಶಾಲೆಯ ಶಿಕ್ಷಕಿ ಹೃದಯಾಘಾತಕ್ಕೆ ಬಲಿ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಚುನಾವಣಾ ಆಯೋಗ ರಾಜ್ಯದಲ್ಲಿ ನಡೆಸುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಕರ್ತವ್ಯದಲ್ಲಿದ್ದ ಬೆಂಗಳೂರಿನ ಕುರುಬರಹಳ್ಳಿ ಸರ್ಕಾರಿ ಶಾಲೆಯ ಶಿಕ್ಷಕಿಯೊಬ್ಬರು ಹೃದಯಾಘಾತದಿಂದ ನಿಧನರಾಗಿದ್ದಾರೆ. ಮೃತ ಶಿಕ್ಷಕಿಯನ್ನು ಶಮಂತ ಕುಮಾರಿ(44) ಎಂದು ಗುರುತಿಸಲಾಗಿದ್ದು, ಅವರು ಇತ್ತೀಚೆಗೆ ಬಿಎಲ್‌ಒ ಕರ್ತವ್ಯಕ್ಕೆ ನಿಯೋಜನೆಗೊಂಡಿದ್ದರು. ಇದರ ಬೆನ್ನಲ್ಲೇ ಶುಗರ್, ಬಿಪಿ ಹೆಚ್ಚಾಗಿ ತೀವ್ರ ಜ್ವರದಿಂದ ಆಸ್ಪತ್ರೆಗೆ ದಾಖಲಾಗಿದ್ದರು. ಆದರೆ ಹೃದಯಾಘಾತವಾಗಿ ನಿಧನರಾಗಿದ್ದಾರೆ.

ಮೇಲಾಧಿಕಾರಿಗಳು ಎಸ್ಐಆರ್ ಪ್ರಕ್ರಿಯೆ ಬೇಗ ಬೇಗ ಮುಗಿಸುವಂತೆ ಒತ್ತಡ ಹಾಕುತ್ತಿದ್ದರು. ಕೆಲಸದಿಂದ ಬಿಡುಗಡೆ ಮಾಡಬಹುದಾ ಎಂದು ಕೇಳಿಕೊಂಡಿದ್ದರು ಎನ್ನಲಾಗಿದೆ.

ಶಿಕ್ಷಕಿ ಶಮಂತ ಕುಮಾರಿ ಅವರು ಮೇಲಾಧಿಕಾರಿಗಳ ಒತ್ತಡದಿಂದ ಹೃದಯಘಾತವಾಗಿ ಸಾವನ್ನಪ್ಪಿದ್ದಾರೆ ಎಂದು ಶಿಕ್ಷಕಿಯ ಕುಟುಂಬಸ್ಥರು ಆರೋಪಿಸಿದ್ದಾರೆ.

# ಬರ ಪರಿಸ್ಥಿತಿ ಎದುರಿಸಲು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1 ಕೋಟಿ ರೂ: DCM ಪರಮೇಶ್ವರ್

## ಬರ ಪರಿಹಾರ ಅನುದಾನ ಬಿಡುಗಡೆ ಕುರಿತು ರಾಜ್ಯ ಸರ್ಕಾರ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮಳೆಯ ಕೊರತೆಯಿಂದ ಉದ್ಭವಿಸುತ್ತಿರುವ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಹಾಗೂ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1 ಕೋಟಿ ರೂ.ಅನುದಾನ ನೀಡಲು ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

**1** ಬರ ಪರಿಸ್ಥಿತಿಯ ಪರಿಶೀಲನಾ ಸಭೆ

**2** ಒಟ್ಟಾರೆ ಪರಿಸ್ಥಿತಿಯ ಸ್ಪಷ್ಟ ಚಿತ್ರಣ

**3** ಪ್ರತಿ ಜಿಲ್ಲೆಗೆ 5 ಕೋಟಿ ರೂ. ಬಿಡುಗಡೆ

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕುಡಿಯುವ ನೀರಿನ ಪೂರೈಕೆಯನ್ನು ಸುಗಮಗೊಳಿಸುವ ಉದ್ದೇಶದಿಂದ ಈಗಾಗಲೇ ಪ್ರತಿ ಜಿಲ್ಲೆಗೆ 5 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಎಂದು ಹೇಳಿದರು. ಜೊತೆಗೆ, ಬರ ನಿರ್ವಹಣೆಗೆ ಸಂಬಂಧಿಸಿದ ಕಾಮಗಾರಿಗಳಿಗಾಗಿ ವೈಯಕ್ತಿಕ ಠೇವಣಿ ಖಾತೆಗಳಲ್ಲಿ ರೂ.329 ಕೋಟಿ ಲಭ್ಯವಿದೆ ಎಂದು ಹೇಳಿದರು.

ಜುಲೈ 25ರಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರು ವಿಭಾಗದ ಬರ ಪರಿಸ್ಥಿತಿಯ ಪರಿಶೀಲನಾ ಸಭೆ ನಡೆಸಲಿದ್ದು, ನಂತರ ಮೈಸೂರು ವಿಭಾಗದಲ್ಲೂ ಇದೇ ರೀತಿಯ ಸಭೆ ನಡೆಯಲಿದೆ ಎಂದು ತಿಳಿಸಿದರು.

ಮಳೆಯ ಕೊರತೆಯಿಂದ ಗ್ರಾಮೀಣ ಪ್ರದೇಶದ ಜನರು ಉದ್ಯೋಗಕ್ಕಾಗಿ ವಲಸೆ ಹೋಗದಂತೆ ತಡೆಯಲು ಎಲ್ಲಾ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಆಜೀವಿಕಾ ಮಿಷನ್ ಗ್ರಾಮೀಣ ಯೋಜನೆಯಡಿ ತಕ್ಷಣ ಉದ್ಯೋಗ ಕಲ್ಪಿಸುವಂತೆ ಸೂಚನೆ ನೀಡಲಾಗಿದೆ.

ಈ ಯೋಜನೆಗೆ ಹಣದ ಕೊರತೆ ಇಲ್ಲ. ಯಾವುದೇ ವಿಳಂಬ ಮಾಡದೆ ಕಾಮಗಾರಿಗಳನ್ನು ಆರಂಭಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎದು ತಿಳಿಸಿದರು.

ಬರ ಪರಿಹಾರ ಅನುದಾನ ಬಿಡುಗಡೆ ಕುರಿತು ರಾಜ್ಯ ಸರ್ಕಾರ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದೆ. ಆದರೆ. ಇದುವರೆಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಸಾಮಾನ್ಯವಾಗಿ ಕೇಂದ್ರ ಸರ್ಕಾರ ಆಗಸ್ಟ್‌ನಲ್ಲಿ ಅಧಿಕೃತ ಮನವಿಪತ್ರ (ಮೆಮೊರಾಂಡಂ) ನಿರೀಕ್ಷಿಸುತ್ತದೆ. ಅದನ್ನು ಸಲ್ಲಿಸಿದ ಬಳಿಕ ಅನುದಾನ ಬಿಡುಗಡೆ ಮಾಡಲಿದೆ.

ಇದೇ ವೇಳೆ, ಜಾನುವಾರುಗಳ ಆಕಸ್ಮಿಕ ಸಾವಿಗೆ ಪರಿಹಾರ ನೀಡುವ ಅನುಗ್ರಹ ಯೋಜನೆ ಅಡಿಯಲ್ಲಿ ಬಾಕಿ ಇರುವ ರೂ.97.57 ಕೋಟಿ ಬಿಡುಗಡೆ ಮಾಡುವಂತೆ ಹಣಕಾಸು ಇಲಾಖೆಗೆ ಮನವಿ ಮಾಡಲಾಗಿದೆ. 2023-24ರಿಂದ 2026-27ರವರೆಗೆ ಈ ಯೋಜನೆಯಡಿ 2.17 ಲಕ್ಷ ಕುರಿ ಈ ಯೋಜನೆಗೆ ಹಣದ ಕೊರತೆ ಇಲ್ಲ. ಹಾಗೂ ಮೇಕೆಗಳ ಸಾವು ಮತ್ತು 82,260 ಹಸು ಸೇರಿದಂತೆ ಇತರೆ ದೊಡ್ಡ ಜಾನುವಾರುಗಳ ಸಾವಿಗೆ ಪರಿಹಾರ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

> ಸಿದ್ದರಾಮಯ್ಯ ಅವರ 2013-18ರ ಅವಧಿಯಲ್ಲಿ ಆರಂಭವಾಗಿದ್ದ ಈ ಯೋಜನೆ ಬಳಿಕ ಹಣದ ಕೊರತೆಯಿಂದ ಸ್ಥಗಿತಗೊಂಡಿತ್ತು. 2023ರಲ್ಲಿ ಮತ್ತೆ ಜಾರಿಗೊಳಿಸಲಾಗಿದ್ದು, ಅಂದಿನಿಂದ ಈವರೆಗೆ ರೂ.134 ಕೋಟಿ ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದರು.- ಪರಮೇಶ್ವರ್

> ಈ ಸಭೆಗಳ ಬಳಿಕ ರಾಜ್ಯದ ಒಟ್ಟಾರೆ ಪರಿಸ್ಥಿತಿಯ ಸ್ಪಷ್ಟ ಚಿತ್ರಣ ದೊರೆಯಲಿದೆ. ನಂತರ ರೈತರು ಹಾಗೂ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಅಗತ್ಯ ಕ್ರಮಗಳ ಬಗ್ಗೆ ಸರ್ಕಾರ ಅಂತಿಮ ನಿರ್ಧಾರ ಕೈಗೊಳ್ಳಲಿದೆ ಎಂದು ಹೇಳಿದರು. - ಪರಮೇಶ್ವರ್

### ಉತ್ತಮ ಮಳೆಯಾದರೆ ರೈತರು ಮತ್ತೆ ಬಿತ್ತನೆ

ಮುಂಗಾರು ಆರಂಭದಲ್ಲಿ ಸುರಿದ ಅಲ್ಪ ಪ್ರಮಾಣದ ಮಳೆಯನ್ನು ನಂಬಿ ರೈತರು ಬಿತ್ತನೆ ಮಾಡಿದ್ದರು. ಆದರೆ, ನಂತರ ಮಳೆ ಬರದ ಕಾರಣ ಬೆಳೆಗಳು ಒಣಗಿವೆ. ಆಗಸ್ಟ್‌ನಲ್ಲಿ ಉತ್ತಮ ಮಳೆಯಾದರೆ ರೈತರು ಮತ್ತೆ ಬಿತ್ತನೆ ಮಾಡುವ ನಿರೀಕ್ಷೆಯಿದೆ ಎಂದು ಆಶಾಭಾವ ವ್ಯಕ್ತಪಡಿಸಿದರು.

### ಜು.25ರ ಬಳಿಕವಷ್ಟೇ ಬರದ ಸ್ಪಷ್ಟ ಚಿತ್ರಣ



ಇನ್ನೂ 2 ಕಂದಾಯ ವಿಭಾಗಗಳಲ್ಲಿ ಬರದ ಪರಿಸ್ಥಿತಿ ಪರಿಶೀಲನೆ ಬಾಕಿ ಇದ್ದು, ಜುಲೈ 25ರ ನಂತರ ರಾಜ್ಯದಲ್ಲಿ ಬರ ಪರಿಸ್ಥಿತಿಯ ಸ್ಪಷ್ಟ ಚಿತ್ರಣ ಲಭಿಸಲಿದೆ ಎಂದು ಕಂದಾಯ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಸದಾಶಿವನಗರದ ಗೃಹ ಕಚೇರಿಯಲ್ಲಿ ನಾಗರಿಕರಿಂದ ಅಹವಾಲುಗಳನ್ನು ಸ್ವೀಕರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ನಮ್ಮ ಸರ್ಕಾರ ಸಿದ್ಧವಿದೆ. ಈಗಾಗಲೇ ಪ್ರತಿ ಶಾಸಕರಿಗೆ 1 ಕೋಟಿ ರೂ. ನೀಡಲು ತೀರ್ಮಾನಿಸಿದ್ದೇವೆ. ಅಲ್ಲದೇ, ಕುಡಿಯುವ ನೀರಿನ ಸಮರ್ಪಕ ಪೂರೈಕೆಗಾಗಿ ಪ್ರತಿ ಜಿಲ್ಲೆಗೆ 5 ಕೋಟಿ ರೂ. ನೀಡಿದ್ದೇವೆ. ಈಗಾಗಲೇ ಪಿಡಿ ಖಾತೆಗಳಲ್ಲಿ 329 ಕೋಟಿ ರೂ. ಲಭ್ಯವಿದೆ ಎಂದರು.

ಮೈಸೂರು ಮತ್ತು ಬೆಂಗಳೂರು ವಿಭಾಗದ ಪ್ರಗತಿ ಪರಿಶೀಲನೆ ಬಾಕಿ ಇದೆ. ಬೆಂಗಳೂರು ವಿಭಾಗದಲ್ಲಿ ಜುಲೈ 25ರಂದು ಮುಖ್ಯಮಂತ್ರಿಗಳ ಜೊತೆಗೆ ಸಭೆ ನಡೆಸುತ್ತೇವೆ. ನಂತರ ಮೈಸೂರಿನಲ್ಲಿ ಸಭೆ ನಡೆಸುತ್ತೇವೆ. ಆಗ ನಮಗೆ ರಾಜ್ಯ ಪರಿಸ್ಥಿತಿಯ ಬಗ್ಗೆ ಸಂಪೂರ್ಣ ಚಿತ್ರಣ ಸಿಗುತ್ತದೆ. ಆ ಬಳಿಕ ಚರ್ಚಿಸಿ, ರೈತರಿಗೆ, ಸಾಮಾನ್ಯ ಜನರಿಗೆ ಸಮಸ್ಯೆಯಾಗದಂತೆ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಬಹುದು ಎಂಬುದರ ಬಗ್ಗೆ ತೀರ್ಮಾನಿಸುತ್ತೇವೆ ಎಂದರು. ಜನರು ಉದ್ಯೋಗಕ್ಕಾಗಿ ಗುಳೆ ಹೋಗುವುದನ್ನು ತಪ್ಪಿಸಲು ಜಿಲ್ಲಾ ಪಂಚಾಯತ್ ಸಿಇಒಗಳು ವಿಬಿ -ಜಿ ರಾಮ್ ಜಿ ಯೋಜನೆಯಡಿ ಕೂಡಲೇ ಜನರಿಗೆ ಉದ್ಯೋಗ ನೀಡುವಂತೆ ಸೂಚಿಸಿದ್ದೇನೆ. ಕೇಂದ್ರ ಸರ್ಕಾರಕ್ಕೆ ನಾವು ಪತ್ರ ಬರೆದಿದ್ದೇವೆ.

## ಕೌನ್ಸೆಲಿಂಗ್ ಆರಂಭ; ಉದ್ಯೋಗಾವಕಾಶ ಕಲ್ಪಿಸಲು ಮುಂದು!

• ಉದಯವಾಹಿನಿ, ಬೆಂಗಳೂರು

ಅಪರಾಧದ ಹಾದಿ ತೊರೆದು ಸಾಮಾನ್ಯ ಜೀವನಕ್ಕೆ ಮರಳಲು ಬಯಸುವ ರೌಡಿಶೀಟರ್‌ಗಳಿಗೆ ಹೊಸ ಅವಕಾಶ ಕಲ್ಪಿಸುವ ಉದ್ದೇಶದಿಂದ ಬೆಂಗಳೂರು ನಗರ ಪೊಲೀಸ್‌ನ ಕೇಂದ್ರ ಅಪರಾಧ ವಿಭಾಗ (ಸಿಸಿಬಿ) ವಿನೂತನ ಕಾರ್ಯಕ್ರಮವೊಂದನ್ನು ಆರಂಭಿಸಿದೆ.

ಮೊದಲ ಬಾರಿಗೆ ರೌಡಿಶೀಟರ್‌ಗಳಿಗೆ ಒನ್-ಆನ್-ಒನ್ (ವೈಯಕ್ತಿಕ) ಕೌನ್ಸೆಲಿಂಗ್ ನಡೆಸಲಾಗುತ್ತಿದ್ದು, ಸಮಾಜದ ಮುಖ್ಯವಾಹಿನಿಗೆ ಮರಳಲು ನೆರವಾಗುವ ಜೊತೆಗೆ ಅವರಿಗೆ ಉದ್ಯೋಗಾವಕಾಶ ಕಲ್ಪಿಸುವ ಪ್ರಯತ್ನಕ್ಕೂ ಪೊಲೀಸರು ಮುಂದಾಗಿದ್ದಾರೆ.

ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಹಾಗೂ ಹೆಚ್ಚುವರಿ ಪೊಲೀಸ್ ಆಯುಕ್ತ (ಅಪರಾಧ) ಅಜಯ್ ಹಿಲೋರಿ ಅವರ ಮಾರ್ಗದರ್ಶನದಲ್ಲಿ ಈ ಯೋಜನೆ ಜಾರಿಯಾಗಿದೆ.

ಈ ಕುರಿತು ಮಾತನಾಡಿರುವ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು,


ಉದಯವಾಹಿನಿ ಚಿತ್ರ

> ಉತ್ತಮ ಬದಲಾವಣೆ ಕಂಡುಬಂದರೆ ಅಂತಹ ರೌಡಿಶೀಟರ್‌ಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ವಿವಿಧ ಸಂಸ್ಥೆಗಳೊಂದಿಗೆ ಸಂಪರ್ಕ ಸಾಧಿಸುವ ಪ್ರಯತ್ನವೂ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

ರೌಡಿಶೀಟರ್‌ಗಳನ್ನು ವಿವಿಧ ವಿಭಾಗಗಳಾಗಿ ವಿಂಗಡಿಸಿ ಆಯ್ದ ವ್ಯಕ್ತಿಗಳಿಗೆ ಕೌನ್ಸೆಲಿಂಗ್ ನೀಡಲಾಗುತ್ತಿದೆ. ಸಂಕಷ್ಟದ ಪರಿಸ್ಥಿತಿಯಿಂದ ಅಪರಾಧದ ದಾರಿ ಹಿಡಿದವರು ದೀರ್ಘಕಾಲ ಯಾವುದೇ ಅಪರಾಧ ಚಟುವಟಿಕೆಯಲ್ಲಿ ಭಾಗಿಯಾಗದೇ ಇದ್ದರೆ, ಅವರಿಗೆ ಮತ್ತೊಂದು ಅವಕಾಶ ನೀಡಬೇಕು. ಅಗತ್ಯವಿದ್ದರೆ ಅವರ ಮೇಲಿನ ರೌಡಿ ಪಟ್ಟವನ್ನೂ ತೆಗೆದುಹಾಕಬೇಕು ಎಂಬುದು ನಮ್ಮ ಉದ್ದೇಶ ಎಂದು ಹೇಳಿದರು.

## ಬಸ್‌ನ ವಿಂಡೊಸೀಟ್ ಪ್ರಯಾಣಿಕರ ಜೇಬಿಗೆ ಕನ್ನ: ಇಬ್ಬರ ಬಂಧನ

• ಉದಯವಾಹಿನಿ, ಬೆಂಗಳೂರು

ವಾಂತಿ ಬರುತ್ತಿದೆ ಎಂದು ನೆಪವೊಡ್ಡಿ ಬಿಎಂಟಿಸಿ ಬಸ್‌ಗಳಲ್ಲಿ ವಿಂಡೋ ಸೀಟಿನಲ್ಲಿ ಕುಳಿತು ಪ್ರಯಾಣಿಸುವ ಪ್ರಯಾಣಿಕರನ್ನ ಗುರಿಯಾಗಿಸಿ ಕನ್ನ ಹಾಕುತ್ತಿದ್ದ ಇಬ್ಬರು ಖದೀಮರನ್ನ ವಿಧಾನಸೌಧ ಠಾಣೆ ಪೊಲೀಸರು ಬಂಧಿಸಿದ್ದಾರೆ. ಕೆಂಗೇರಿಯ ಮುಬಾರಕ್ ಪಾಷಾ, ಜೆ.ಜೆ.ನಗರದ ಅನ್ವರ್ ಪಾಷಾ ಬಂಧಿತ ಆರೋಪಿಗಳು. ಕೃತ್ಯದಲ್ಲಿ ಇನ್ನೂ ಮೂವರು ಭಾಗಿಯಾಗಿ ತಲೆಮರೆಸಿಕೊಂಡಿದ್ದು, ಅವರ ಬಂಧನಕ್ಕಾಗಿ ಶೋಧ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## KMF ಹಾಲಿನ ಉತ್ಪನ್ನಗಳ ಬೆಲೆ ಏರಿಕೆ: ನಾಳೆಯಿಂದ ಪರಿಷ್ಕೃತ ದರ ಜಾರಿಗೆ!

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ಗ್ರಾಹಕರಿಗೆ ಮತ್ತೊಂದು ಶಾಕ್ ನೀಡಿದೆ. ತನ್ನ ಜನಪ್ರಿಯ ನಂದಿನಿಬ್ರ್ಯಾಂಡ್‌ನ ಬೆಣ್ಣೆ ಮತ್ತು ತುಪ್ಪದ ದರವನ್ನು ದಿಢೀರ್ ಏರಿಕೆ ಮಾಡಿದ್ದು, ಪರಿಷ್ಕೃತ ದರಗಳು ನಾಳೆಯಿಂದಲೇ ಜಾರಿಗೆ ಬರಲಿವೆ.

ತುಪ್ಪದ ದರವನ್ನು ಪ್ರತಿ ಕೆಜಿಗೆ 15 ರೂಪಾಯಿ ಹೆಚ್ಚಳ ಮಾಡಲಾಗಿದೆ. ಹಾಗೆಯೇ ಬೆಣ್ಣೆಯ ಬೆಲೆಯನ್ನು ಪ್ರತಿ ಕೆಜಿಗೆ 22 ರೂ. ಏರಿಕೆ ಮಾಡಲಾಗಿದೆ. ಈ ನೂತನ ದರಗಳು ಜುಲೈ 24 ರಿಂದ (ಶುಕ್ರವಾರ) ಅಧಿಕೃತವಾಗಿ ಜಾರಿಗೆ ಬರಲಿವೆ.

ರಾಜ್ಯಾದ್ಯಂತ ಇರುವ ಎಲ್ಲಾ ಕೆಎಂಎಫ್ ಮಳಿಗೆಗಳಲ್ಲಿ ಈ ಹೊಸ ದರಗಳು ಅನ್ವಯವಾಗಲಿವೆ ಎಂದು ತಿಳಿದುಬಂದಿದೆ. ಹಾಲಿನ ಉತ್ಪನ್ನಗಳ ಬೆಲೆ ಏರಿಕೆಯು ಕೇವಲ ಗೃಹ ಬಳಕೆದಾರರಿಗೆ ಮಾತ್ರವಲ್ಲದೆ, ಹೋಟೆಲ್ ಮತ್ತು ಬೇಕರಿ



ಉದಯವಾಹಿನಿ ಚಿತ್ರ

ಉದ್ಯಮದ ಮೇಲೂ ದೊಡ್ಡ ಪರಿಣಾಮ ಬೀರಲಿದೆ. ತುಪ್ಪ ಮತ್ತು ಬೆಣ್ಣೆಯನ್ನು ಹೆಚ್ಚಾಗಿ ಬಳಸುವ ಸಿಹಿ ತಿಂಡಿ ತಯಾರಕರು ಹಾಗೂ ಹೋಟೆಲ್ ಮಾಲೀಕರು ಈ ದರ ಏರಿಕೆಯಿಂದ ಕಂಗೆಟ್ಟಿದ್ದಾರೆ.

**ಬೆಲೆ ಏರಿಕೆಗೆ ಕೆಎಂಎಫ್ ಸಮರ್ಥನೆ:** ಹಾಲು ಒಕ್ಕೂಟಗಳ ನಿರ್ವಹಣಾ ವೆಚ್ಚ, ಪ್ಯಾಕೇಜಿಂಗ್ ಸಾಮಗ್ರಿಗಳ ಬೆಲೆ ಹಾಗೂ ಸಾಗಣೆ ವೆಚ್ಚ ಗಣನೀಯವಾಗಿ ಹೆಚ್ಚಿರುವುದರಿಂದ ದರ ಏರಿಕೆ ಅನಿವಾರ್ಯವಾಗಿದೆ ಎಂದು ಕೆಎಂಎಫ್ ಮೂಲಗಳು ತಿಳಿಸಿವೆ.

ಖಾಸಗಿ ಬ್ರ್ಯಾಂಡ್‌ಗಳ ದರಕ್ಕೆ ಹೋಲಿಸಿದರೆ ನಂದಿನಿ ಉತ್ಪನ್ನಗಳ ಬೆಲೆ ಇಂದಿಗೂ ಅತ್ಯಂತ ಸ್ಪರ್ಧಾತ್ಮಕವಾಗಿದೆ ಎಂದು ಸಂಸ್ಥೆ ಹೇಳಿಕೊಂಡಿದೆ.

ವರಮಹಾಲಕ್ಷ್ಮಿ ಹಬ್ಬ ಸೇರಿದಂತೆ ಸಾಲು ಸಾಲು ಹಬ್ಬಗಳ ದಿನಗಳು ಹತ್ತಿರವಾಗುತ್ತಿರುವ ಬೆನ್ನಲ್ಲೇ ಈ ದರ ಏರಿಕೆ ಜಾರಿಗೆ ಬಂದಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ.

## KPSC ಪರೀಕ್ಷೆ ಅಕ್ರಮ: 80 ಲಕ್ಷಕ್ಕೆ ಸರ್ಕಾರಿ ಉದ್ಯೋಗ ಫಿಕ್ಸ್; ಎಚ್ಚೆತ್ತ ಕರ್ನಾಟಕ ಗೃಹ ಇಲಾಖೆ!

• ಉದಯವಾಹಿನಿ, ಬೆಂಗಳೂರು

ಮುಂಬರುವ ತಿಂಗಳುಗಳಲ್ಲಿ ನಿಗದಿಯಾಗಿರುವ ಪೊಲೀಸ್ ಇಲಾಖೆಯಲ್ಲಿನ ಹುದ್ದೆಗಳು ಸೇರಿದಂತೆ ರಾಜ್ಯ ಸರ್ಕಾರದ 70,000ಕ್ಕೂ ಹೆಚ್ಚು ಹುದ್ದೆಗಳಿಗೆ ನೇಮಕಾತಿ ಪರೀಕ್ಷೆಗಳ ಸಿದ್ಧತೆಗಳನ್ನು ಹಿರಿಯ ಅಧಿಕಾರಿಗಳು ಪರಿಶೀಲಿಸಿದ್ದು ಕರ್ನಾಟಕ ಗೃಹ ಇಲಾಖೆ ಪರೀಕ್ಷಾ ದುಷ್ಕೃತ್ಯಗಳ ಬಗ್ಗೆ ಶೂನ್ಯ ಸಹಿಷ್ಣುತೆಯ ನೀತಿಯನ್ನು ಅಳವಡಿಸಿಕೊಂಡಿದೆ ಎಂದು ಹೇಳಿದೆ. ಹೆಚ್ಚುವರಿ ಮುಖ್ಯ ಕಾರ್ಯದರ್ಶಿ (ಗೃಹ) ರಾಜೇಂದರ್ ಕಟಾರಿಯಾ ಅವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಪರಿಶೀಲನಾ ಸಭೆಯಲ್ಲಿ, ಪರೀಕ್ಷೆಗಳನ್ನು ಶಾಂತಿಯುತ, ಸುರಕ್ಷಿತ, ನ್ಯಾಯಯುತ ಮತ್ತು ಪಾರದರ್ಶಕ ರೀತಿಯಲ್ಲಿ ನಡೆಸಲು ನಿಖರವಾದ ಯೋಜನೆ ಮತ್ತು ಅಂತರ-ಇಲಾಖೆಯ ಸಮನ್ವಯವನ್ನು ಖಚಿತಪಡಿಸಿಕೊಳ್ಳಲು ಎಲ್ಲಾ ಜಿಲ್ಲಾ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಸರ್ಕಾರ ಹೇಳಿಕೆಯಲ್ಲಿ ತಿಳಿಸಿದೆ.

ಸಭೆಯಲ್ಲಿ ಹಿರಿಯ ಪೊಲೀಸ್, ಕಂದಾಯ ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ಅಧಿಕಾರಿಗಳು, ಪೊಲೀಸ್ ಆಯುಕ್ತರು, ಉಪ ಆಯುಕ್ತರು ಎಂದು ಅದು ಹೇಳಿದೆ. ಸರ್ಕಾರವು ಪರೀಕ್ಷಾ ದುಷ್ಕೃತ್ಯಗಳ ಬಗ್ಗೆ ಶೂನ್ಯ ಸಹಿಷ್ಣುತೆಯ ನೀತಿಯನ್ನು ಅಳವಡಿಸಿಕೊಂಡಿದೆ. ಭ್ರಷ್ಟಾಚಾರ ಮತ್ತು ಅನ್ಯಾಯದ ವಿಧಾನಗಳನ್ನು ತಡೆಗಟ್ಟುವ ಕ್ರಮಗಳು) ಕಾಯ್ದೆ, 2023ರ ಅಡಿಯಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಇಲಾಖೆ ತಿಳಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಸಂಪೂರ್ಣ ಭದ್ರತೆ, ಗೌಪ್ಯ ಪರೀಕ್ಷಾ ಸಾಮಗ್ರಿಗಳ ಸುರಕ್ಷಿತ ಸಾಗಣೆ ಮತ್ತು ಪಾಲನೆ, ಸಾಕಷ್ಟು ಪೊಲೀಸ್ ನಿಯೋಜನೆ, ಸಂಚಾರ ನಿರ್ವಹಣೆ, ಮೇಲ್ವಿಚಾರಣೆಯನ್ನು ಖಚಿತಪಡಿಸಿಕೊಳ್ಳಲು ಕಟಾರಿಯಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

# ಸೆಲ್ಫ್ ಎಕ್ಸಿಕ್ಯೂಷನ್ ಯೋಜನೆಗಳಲ್ಲಿ ನಿಯಮ ಉಲ್ಲಂಘಿಸಿದರೆ ಕಠಿಣ ಕ್ರಮ: ಇಂಧನ ಸಚಿವ ಕೆ.ಜೆ. ಜಾರ್ಜ್

## ಟೌನ್‌ಶಿಪ್‌ಗಳು ಹಾಗೂ ಅಭಿವೃದ್ಧಿ ಯೋಜನೆಗಳು ತಮ್ಮ ವೆಚ್ಚದಲ್ಲಿಯೇ ವಿದ್ಯುತ್ ಉಪಕೇಂದ್ರ ಹಾಗೂ ಮೂಲಸೌಕರ್ಯ ನಿರ್ಮಿಸುವುದು ಕಡ್ಡಾಯ

• ಉದಯವಾಹಿನಿ, ಬೆಂಗಳೂರು

ಸೆಲ್ಫ್ ಎಕ್ಸಿಕ್ಯೂಷನ್ ಯೋಜನೆಗಳಡಿ ಕಡ್ಡಾಯವಾಗಿ ನಿರ್ಮಿಸಬೇಕಾದ ವಿದ್ಯುತ್ ಮೂಲಸೌಕರ್ಯವನ್ನು ಸಕಾಲದಲ್ಲಿ ಪೂರ್ಣಗೊಳಿಸದ ಹಾಗೂ ಕೆಇಆರ್‌ಸಿ ನಿಯಮಗಳನ್ನು ಉಲ್ಲಂಘಿಸಿರುವ ಯೋಜನೆಗಳ ವಿರುದ್ಧ ನಿಯಮಾನುಸಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್ ಎಚ್ಚರಿಸಿದರು.

ಈ ಸಂಬಂಧ ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ ನಿಯಮಗಳ ಪ್ರಕಾರ 7.5ಗಿಂತ ಹೆಚ್ಚಿನ ಮಂಜೂರಾತಿ ವಿದ್ಯುತ್ ಭಾರ (ಹೊಂದಿರುವ ವಸತಿ ಸಮುಚ್ಚಯಗಳು, ಟೌನ್‌ಶಿಪ್‌ಗಳು, ಬೃಹತ್ ಲೇಔಟ್‌ಗಳು ಹಾಗೂ ಇತರ ಅಭಿವೃದ್ಧಿ ಯೋಜನೆಗಳು ತಮ್ಮ ವೆಚ್ಚದಲ್ಲಿಯೇ ವಿದ್ಯುತ್ ಉಪಕೇಂದ್ರ ಹಾಗೂ ಸಂಬಂಧಿತ ವಿದ್ಯುತ್ ಮೂಲಸೌಕರ್ಯವನ್ನು ನಿರ್ಮಿಸುವುದು ಕಡ್ಡಾಯ ಎಂದು ತಿಳಿಸಿದ್ದಾರೆ.

ಈ ವ್ಯವಸ್ಥೆಯ ಉದ್ದೇಶ ವೇಗವಾಗಿ ಬೆಳೆಯುತ್ತಿರುವ ನಗರ ಪ್ರದೇಶಗಳಲ್ಲಿ ಅಗತ್ಯ ವಿದ್ಯುತ್ ಮೂಲಸೌಕರ್ಯವನ್ನು ಯೋಜನೆಗಳ ಜೊತೆಯಲ್ಲೇ ಅಭಿವೃದ್ಧಿಪಡಿಸುವುದು. ಇದರಿಂದ ಸಾರ್ವಜನಿಕ ವಿದ್ಯುತ್ ಜಾಲದ ಮೇಲಿನ ಹೆಚ್ಚುವರಿ ಒತ್ತಡ ಕಡಿಮೆಯಾಗುವುದರ ಜೊತೆಗೆ, ಖಾಸಗಿ ಯೋಜನೆಗಳಿಗೆ ಅಗತ್ಯವಾಗುವ ಮೂಲಸೌಕರ್ಯಕ್ಕಾಗಿ ಸರ್ಕಾರ ಸಾರ್ವಜನಿಕ ಹಣ ವೆಚ್ಚ ಮಾಡುವ ಅಗತ್ಯವೂ ತಪ್ಪುತ್ತದೆ ಎಂದಿದ್ದಾರೆ.



ಉದಯವಾಹಿನಿ ಚಿತ್ರ

ಈಗಾಗಲೇ ಬೆಂಗಳೂರು ನಗರದಲ್ಲಿ ಇಂತಹ 45 ಪ್ರಕರಣಗಳನ್ನು ಗುರುತಿಸಲಾಗಿದ್ದು, ಸಂಬಂಧಿಸಿದ ಯೋಜನಾ ಅನುಷ್ಠಾನ ಸಂಸ್ಥೆಗಳಿಗೆ ನೋಟಿಸ್ ನೀಡಲಾಗಿದೆ. ಇಂತಹ ಪ್ರಕರಣಗಳಲ್ಲಿ ಕೆಇಆರ್‌ಸಿ ನಿಯಮಗಳಂತೆ ಶೇ.10ರಷ್ಟು ದಂಡ ವಿಧಿಸಲಾಗುವುದು. ನಿಗದಿತ ಅವಧಿಯೊಳಗೆ ಕಡ್ಡಾಯ ವಿದ್ಯುತ್ ಮೂಲಸೌಕರ್ಯವನ್ನು ಪೂರ್ಣಗೊಳಿಸದಿದ್ದಲ್ಲಿ ಹಾಗೂ ಕೆಪಿಟಿಸಿಎಲ್ ಉಪಕೇಂದ್ರಗಳಲ್ಲಿ ವಿದ್ಯುತ್ ಪ್ರಸರಣ ಸಾಮರ್ಥ್ಯದ ಮೇಲೆ ಒತ್ತಡ ಉಂಟಾಗಿದ್ದಲ್ಲಿ, ಸಾರ್ವಜನಿಕರಿಗೆ ನಿರಂತರ ಹಾಗೂ ಗುಣಮಟ್ಟದ ವಿದ್ಯುತ್ ಪೂರೈಕೆಯನ್ನು ಕಾಪಾಡುವ ಹಿತದೃಷ್ಟಿಯಿಂದ, ಜಾರಿಯಲ್ಲಿರುವ ಕಾನೂನು ಹಾಗೂ ನಿಯಮಗಳ ಅನ್ವಯ ಸಂಬಂಧಿತ ಯೋಜನೆಗಳ ವಿದ್ಯುತ್ ಸಂಪರ್ಕವನ್ನು ಸ್ಥಗಿತಗೊಳಿಸುವುದು ಸೇರಿದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದಿದ್ದಾರೆ.

ಇದರ ಜೊತೆಗೆ, 7.5 ಒಗಿಂಗಿಂತ ಕಡಿಮೆ ಮಂಜೂರಾತಿ ವಿದ್ಯುತ್ ಲೋಡ್ ಅನುಮತಿ ಪಡೆದು ನಂತರ ಅನುಮೋದಿತ ಸಾಮರ್ಥ್ಯಕ್ಕಿಂತ ಹೆಚ್ಚಿನ ವಿದ್ಯುತ್ ಬಳಕೆ ಮಾಡುತ್ತಿರುವ ಕೆಲವು ಯೋಜನೆಗಳೂ ಪತ್ತೆಯಾಗಿವೆ. ಅಗತ್ಯ ವಿದ್ಯುತ್ ಮೂಲಸೌಕರ್ಯವನ್ನು ವಿಸ್ತರಿಸದೆ ಹೆಚ್ಚುವರಿ ವಿದ್ಯುತ್ ಬಳಕೆ ಮಾಡುತ್ತಿರುವುದರಿಂದ ಸಾರ್ವಜನಿಕ ವಿದ್ಯುತ್ ಜಾಲದ ಮೇಲೆ ಹೆಚ್ಚಿನ ಒತ್ತಡ ಉಂಟಾಗಿ, ಅಕ್ಕಪಕ್ಕದ ನಿವಾಸಿಗಳು ಹಾಗೂ ಇತರ ಗ್ರಾಹಕರಿಗೆ ಗುಣಮಟ್ಟದ ವಿದ್ಯುತ್ ಪೂರೈಕೆಯಲ್ಲಿ ಸಮಸ್ಯೆಗಳು ಉಂಟಾಗುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

### ಹೆಚ್ಚುವರಿ ಆರ್ಥಿಕ ಹೊರೆ ಬೀಳಬಾರದು

ಸಾರ್ವಜನಿಕರಿಗೆ ನಿರಂತರ ಹಾಗೂ ಗುಣಮಟ್ಟದ ವಿದ್ಯುತ್ ಪೂರೈಕೆ ದೊರೆಯಬೇಕು. ಸಾರ್ವಜನಿಕ ವಿದ್ಯುತ್ ಮೂಲಸೌಕರ್ಯದ ಮೇಲೆ ಅನಗತ್ಯ ಒತ್ತಡ ಉಂಟಾಗಬಾರದು ಹಾಗೂ ಸರ್ಕಾರದ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳಬಾರದು ಎಂಬ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ ಸಾಕಷ್ಟು ಸಮಯಾವಕಾಶ ನೀಡಲಾಗಿದೆ. ಆದರೂ ನಿಯಮ ಪಾಲನೆ ಆಗದಿದ್ದಲ್ಲಿ, ಮುಖ್ಯಮಂತ್ರಿಗಳ ನಿರ್ದೇಶನದಂತೆ ಸಾರ್ವಜನಿಕ ಹಿತಾಸಕ್ತಿಯನ್ನು ಕಾಪಾಡಲು ಅಗತ್ಯ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಎಚ್ಚರಿಕೆ ನೀಡಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ಹೆದರಿಕೆ ನಿಮ್ಮ ಸಂತೋಷವನ್ನು ಹಾಳುಗೆಡವಬಹುದು. ನೀವು ಇದು ನಮ್ಮ ಆಲೋಚನೆಗಳು ಮತ್ತು ಕಲ್ಪನೆಯ ಪ್ರಭಾವವೆಂದು ಅರ್ಥಮಾಡಿಕೊಳ್ಳಬೇಕು. ಇದು ಸ್ವಾಭಾವಿಕತೆಯನ್ನು ಕೊಲ್ಲುತ್ತದೆ-ಜೀವನದ ಆನಂದವನ್ನು ಹೀರಿಕೊಳ್ಳುತ್ತದೆ ಹಾಗೂ ನಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ.

**ವೃಷಭ** ಆತ್ಮವಿಶ್ವಾಸದ ನಿಮ್ಮನ್ನು ಆವರಿಸಲು ಬಿಡಬೇಡಿ, ಏಕೆಂದರೆ ಅದು ಕೇವಲ ನಿಮ್ಮ ಸಮಸ್ಯೆಯನ್ನು ಮಾತ್ರ ಸಂಕೀರ್ಣಗೊಳಿಸುತ್ತದೆ ಮತ್ತು ನಿಮ್ಮ ಪ್ರಗತಿಯನ್ನು ಹಾಳುಗೆಡವಬಲ್ಲದು. ನಿಮ್ಮ ಆತ್ಮವಿಶ್ವಾಸವನ್ನು ಮರಳಿ ಪಡೆಯಲು ನಿಮ್ಮನ್ನು ವ್ಯಕ್ತಪಡಿಸಿ ಮತ್ತು ಸಮಸ್ಯೆಯನ್ನು ನಿಭಾಯಿಸಲು ಹೃತ್ಪೂರ್ವಕವಾದ ನಗು ಚೆಲ್ಲಿ.

**ಮಿಥುನ** ಹೊರಾಂಗಣ ಚಟುವಟಿಕೆಗಳು ನಿಮಗೆ ಉಪಯುಕ್ತವಾಗುತ್ತವೆ. ಕೋಟೆಯೊಳಗಿನ ಜೀವನ ಶೈಲಿ ಮತ್ತು ಯಾವಾಗಲೂ ಭದ್ರತೆಯ ಬಗ್ಗೆ ಯೋಚಿಸುವುದು ನಿಮ್ಮ ದೈಹಿಕ ಹಾಗೂ ನಿಮ್ಮ ಮಾನಸಿಕ ಬೆಳವಣಿಗೆಯನ್ನು ಕುಂಠಿತಗೊಳಿಸುತ್ತವೆ. ಇದು ನಿಮ್ಮನ್ನು ಒಬ್ಬ ಗಾಬರಿಯ ವ್ಯಕ್ತಿಯನ್ನಾಗಿಯೂ ಮಾಡುತ್ತದೆ.

**ಕರ್ಕಾಟಕ** ಮಾನಸಿಕ ಒತ್ತಡ ತರುವ ಸುಪ್ತ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೈಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ.

**ಸಿಂಹ** ನೀವು ನಿಮ್ಮ ಮನೆಯ ಯಾವುದೇ ಸದಸ್ಯರಿಂದ ಹಣವನ್ನು ಸಾಲ ತೆಗೆದುಕೊಂಡಿದ್ದರೆ ಅದನ್ನು ಇಂದು ಮರುಪಾವತಿಸಿ ಇಲ್ಲದಿದ್ದರೆ ನಿಮ್ಮ ವಿರುದ್ಧವಾಗಿ ಕಾನೂನು ಪ್ರಕರಣ ಮಾಡಬಹುದು. ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಸಂತೋಷದ ಮೂಲವಾಗಬಹುದು.

**ಕನ್ಯಾ** ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಮನೆಯಲ್ಲಿನ ಕೆಲವು ಬದಲಾವಣೆಗಳು ಮತ್ತು ನಿಮ್ಮನ್ನು ಭಾವುಕರನ್ನಾಗಿಸಬಹುದು ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

**ತುಲಾ** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಇನ್ನೂ ಸಂಬಳ ಪಡೆಯದವರು, ಅವರು ಹಣಕ್ಕಾಗಿ ತುಂಬಾ ಚಿಂತೆ ಮಾಡಬಹುದು ಮತ್ತು ನಿಮ್ಮ ಸ್ನೇಹಿತರಿಂದ ಸಾಲವನ್ನು ಕೇಳಬಹುದು.

**ವೃಶ್ಚಿಕ** ನೀವು ಪ್ರೀತಿಯ ಮನೋಭಾವದಲ್ಲಿರುತ್ತೀರಿ ಮತ್ತು ಅದಕ್ಕೆ ಅವಕಾಶಗಳೂ ಸಾಕಷ್ಟಿರುತ್ತವೆ. ಏಕಾಂತದಲ್ಲಿ ಸಮಯ ಕಳೆಯುವುದು ಉತ್ತಮ ಆದರೆ ನಿಮ್ಮ ಮೆದುಳಿನಲ್ಲಿ ಏನಾದರು ನಡೆಯುತ್ತಿದ್ದರೆ ಜನರಿಂದ ದೂರವಿದ್ದು ನೀವು ಇನ್ನಷ್ಟು ಹೆಚ್ಚು ತೊಂದರೆಗೊಳಗಾಗಬಹುದು.

**ಧನಸ್ಸು** ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ನೀವು ಅತ್ಯಂತ ಅನಿರೀಕ್ಷಿತ ಮೂಲಗಳಿಂದ ಗಳಿಕೆಯ ಸಾಧ್ಯತೆಯನ್ನು ಹೊಂದಿದ್ದೀರಿ. ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮ ಸುತ್ತಮುತ್ತಲಿನ ಪರಿಸರವನ್ನು ಬೆಳಗಿಸುತ್ತದೆ. ಒಬ್ಬ ಆಸಕ್ತಿದಾಯಕ ವ್ಯಕ್ತಿಯನ್ನು ಭೇಟಿ ಮಾಡುವ ಸಾಧ್ಯತೆಗಳಿವೆ.

**ಮಕರ** ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು.

**ಕುಂಭ** ನಿಮ್ಮ ಬಾಲ್ಯದ ನೆನಪುಗಳು ನಿಮ್ಮನ್ನು ಆವರಿಸಿಕೊಳ್ಳುತ್ತವೆ. ಈ ಪ್ರಕ್ರಿಯೆಯಲ್ಲಿ ನಿಮಗೆ ನೀವೇ ಅನಗತ್ಯ ಮಾನಸಿಕ ಒತ್ತಡ ನೀಡಬಹುದು. ನಿಮ್ಮ ಪ್ರಮುಖ ಆತಂಕ ಮತ್ತು ಒತ್ತಡದ ಒಂದು ಕಾರಣವೆಂದರೆ ಕೆಲವೊಮ್ಮೆಯಾದರೂ ನೀವು ಮಗುವಿನಂತಿರುವ ಸಾಮರ್ಥ್ಯವನ್ನು ಕಳೆದುಕೊಂಡಿದ್ದೀರಿ ಎಂದು ಚಿಂತಿಸುವುದಾಗಿದೆ.

**ಮೀನ** ನಿಮ್ಮ ಉತ್ತಮ ಆರೋಗ್ಯದ ಸಲುವಾಗಿ ದೀರ್ಘ ನಡಿಗೆಗೆ ಹೋಗಿ. ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು. ದೂರದ ಸಂಬಂಧಿಗಳಿಂದ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷದ ಕ್ಷಣಗಳನ್ನು ತರುವುದು.

# ಅಧಿಕಾರಿಗಳಿಗೆ ಹೇಳಿ ಹೇಳಿ ಸುಸ್ತು; ಚಂದಾ ಹಣದಿಂದ ರಸ್ತೆ ಸರಿಪಡಿಸಿಕೊಂಡ ರೈತರು

### ಶಾಸಕರಿಗೆ, ಸಂಸದರಿಗೆ ಹಾಗೂ ಅಧಿಕಾರಿಗಳಿಗೆ ಹತ್ತಾರು ಬಾರಿ ಮನವಿ ಮಾಡಿದರೂ ಯಾರೂ ತಿರುಗಿ ನೋಡಲಿಲ್ಲ

• **ಉದಯವಾಹಿನಿ, ದಾವಣಗೆರೆ:**

ದೇಶಕ್ಕೆ ಸ್ವಾತಂತ್ರ್ಯ ಬಂದು 79 ವರ್ಷಗಳೇ ಕಳೆದಿವೆ. ಆದರೆ, ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಹಿರೇಮಲ್ಲನಹೊಳೆ ಗ್ರಾ.ಪಂ ವ್ಯಾಪ್ತಿಯ ಗಡಿ ಗ್ರಾಮ ಚಿಕ್ಕಮಲ್ಲನಹೊಳೆ ಡಾಂಬರು ರಸ್ತೆಯನ್ನೇ ಕಂಡಿಲ್ಲ. ಡಾಂಬರು ರಸ್ತೆ ನಿರ್ಮಿಸುವಂತೆ ಗ್ರಾಮಸ್ಥರು ಮನವಿ ಮಾಡುತ್ತಲೇ ಬಂದಿದ್ದಾರೆ. ಆದರೆ, ಅಧಿಕಾರಿಗಳ ಬೇಜವಾಬ್ದಾರಿಯುತ ವರ್ತನೆಯಿಂದ ಬೇಸತ್ತ ಗ್ರಾಮದ ಜನರು ಇದೀಗ ತಾವೇ ರಸ್ತೆ ದುರಸ್ತಿ ಮಾಡಿಕೊಂಡಿದ್ದಾರೆ. ರಸ್ತೆಗಾಗಿ ಅಧಿಕಾರಿಗಳಿಗೆ ಕೈಮುಗಿದು ಸಾಕಾಯ್ತು. ಕೊನೆಗೆ ನಾವೇ ಈ ಕ್ರಾಂತಿಕಾರಿ ನಿರ್ಧಾರಕ್ಕೆ ಬಂದೆವು. ಗ್ರಾಮದ ಜನರೆಲ್ಲ ಸೇರಿ ಹಣ ಹಾಕಿ, ಕಲ್ಲು-ಮಣ್ಣು ತರಿಸಿ ಮಾರುದ್ದ ಬಿದ್ದ

**1 : ಕ್ರಾಂತಿಕಾರಿ ನಿರ್ಧಾರಕ್ಕೆ ಬಂದೆವು**
**2 : ಹಲವು ಅಪಘಾತಗಳು ಸಂಭವಿಸಿವೆ**
**3 : ರೈತರು ಎದ್ದು ಬಿದ್ದು ಓಡಾಡಬೇಕು**

ಗುಂಡಿಗಳನ್ನು ಮುಚ್ಚುತ್ತಿದ್ದೇವೆ ಎಂದು ಸ್ಥಳೀಯರು ಹೇಳಿದರು.

**ಇದು ಹಿರೇಮಲ್ಲನಹೊಳೆ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ:** ಹಿರೇಮಲ್ಲನಹೊಳೆ ಗ್ರಾ.ಪಂ ವ್ಯಾಪ್ತಿಯ ಚಿಕ್ಕಮಲ್ಲನಹೊಳೆಗೆ ಸಂಪರ್ಕ ಕಲ್ಪಿಸುವ ಚಿಕ್ಕಮಲ್ಲನಹೊಳೆ ಖಾನಹೊಸಹಳ್ಳಿ ರಸ್ತೆಯಲ್ಲಿ ಹೋಗುತ್ತಿದ್ದರೆ ಜೀವ ಕೈಯಲ್ಲಿರುತ್ತದೆ. ಈ ರಸ್ತೆ ತುಂಬೆಲ್ಲಾ ಬೃಹತ್ ಗುಂಡಿಗಳಿರುವುದು ಇದಕ್ಕೆ ಕಾರಣ. ಈ ರಸ್ತೆ ಕೇವಲ



ಉದಯವಾಹಿನಿ ಚಿತ್ರ

> ರಸ್ತೆಯ ಎರಡೂ ಬದಿಗಳಲ್ಲಿ ಮಳೆ ನೀರು ಹರಿದುಹೋಗಲು ಚರಂಡಿ ಸಹ ನಿರ್ಮಿಸಿದ್ದೇವೆ. ಸದ್ಯ ರಸ್ತೆ ಕಾಮಗಾರಿ ಭಾಗಶಃ ಮುಗಿದಿದ್ದು, ಅಲ್ಪಸ್ವಲ್ಪ ಬಾಕಿ ಇದೆ. ಇದು ನಿಜಕ್ಕೂ ಸರ್ಕಾರ ನಡೆಸುವವರಿಗೆ ನಾಚಿಕೆಗೇಡಿನ ಸಂಗತಿ ಎಂದು ಚಿಕ್ಕಮಲ್ಲನಹೊಳೆ ಆಕ್ರೋಶ ವ್ಯಕ್ತಪಡಿಸಿದರು. -ಗ್ರಾಮದ ಮುಖಂಡರು

ಒಂದೂರಿಗೆ ಸೀಮಿತವಾಗಿಲ್ಲ. ಕಲ್ಲಹಳ್ಳಿ, ಕೊಟ್ಟೂರು, ಕೂಡ್ಲಿಗಿ ಸೇರಿ ವಿಜಯನಗರ ಜಿಲ್ಲೆಯ ಹತ್ತಾರು ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆಯೂ ಹೌದು. ಆದರೆ, ಸುಮಾರು 2-3 ಕಿ.ಮೀ ಉದ್ದದ ಈ ರಸ್ತೆ ಸಂಪೂರ್ಣ ಮಣ್ಣಿನಿಂದ ಕೂಡಿದ್ದು ಮೊಣಕಾಲುದ್ದ ತಗ್ಗು-ಗುಂಡಿಗಳಿಂದ ಆವೃತವಾಗಿದೆ. ಮಳೆಗಾಲ ಬಂತೆಂದರೆ ಈ ರಸ್ತೆಯಲ್ಲಿ ಕಾಲಿಡುವುದಕ್ಕೂ ಆಗದು. ಗುಂಡಿಗಳಲ್ಲಿ ಕೆಸರು ತುಂಬಿಕೊಂಡು ಬೈಕ್ ಸವಾರರು, ರೈತರು ಎದ್ದು ಬಿದ್ದು ಓಡಾಡಬೇಕು. ಈಗಾಗಲೇ ಹಲವು ಅಪಘಾತಗಳು ಸಂಭವಿಸಿವೆ. ಸಾವು-ನೋವುಗಳೂ ಆಗಿವೆ. ಬಸ್‌ಗಳ ಸಂಚಾರವೂ ನಿಲ್ಲುವ ಹಂತಕ್ಕೆ ತಲುಪಿತ್ತು. ಕೊನೆಗೆ ಹಾಗೂ-ಹೀಗೂ ಹೋರಾಟ ಮಾಡಿ ಬಸ್ ಬರುವಂತೆ ಮಾಡಲಾಗಿದೆ. ರೈತರು, ಶಾಲಾ ಮಕ್ಕಳಿಗಾಗಿ ರಸ್ತೆಯನ್ನು ಸರಿಪಡಿಸುವಂತೆ ಮನವಿ ಮಾಡಿ ಸಾಕಾಗಿತ್ತು. ಕೊನೆಗೆ ನಾವೇ ಹಣ ಹಾಕಿ, ಕಲ್ಲು-ಮಣ್ಣು ತರಿಸಿ ಗುಂಡಿಗಳನ್ನು ಮುಚ್ಚುತ್ತಿದ್ದೇವೆ. ಇನ್ನು ಸ್ವಲ್ಪ ಕಾಮಗಾರಿ ಬಾಕಿ ಎಂದು ಸ್ಥಳೀಯರು ತಿಳಿಸಿದರು. ನಾನು ಚಿಕ್ಕಮಲ್ಲಹೊಳೆ ಗ್ರಾಮದ ರೈತ. ಪ್ರತಿ ದಿನ ಈ ರಸ್ತೆ ಮೂಲಕವೇ ನಾವು ಸಂಚರಿಸಬೇಕು. ಗುಂಡಿಮಯ ರಸ್ತೆಯನ್ನು ಸರಿ ಮಾಡುವಂತೆ ಅಧಿಕಾರಿಗಳಿಗೆ ಮನವಿ ಮಾಡಿದರೂ ಉಪಯೋಗ ಆಗಲಿಲ್ಲ. ಯಾರ ಸಹವಾಸ ಬೇಡವೆಂದು ನಾವೇ ಸ್ವತಃ ರಸ್ತೆ ನಿರ್ಮಾಣ ಮಾಡಿಕೊಂಡಿದ್ದೇವೆ. ಪಂಚಾಯತಿಯಿಂದ ರಸ್ತೆ ಮಾಡಿ ಎಂದು ಮನವಿ ಕೊಟ್ಟಾಗ ರಸ್ತೆ ಬದಿಯ ಎರಡು ಗಿಡಗಳನ್ನು ತೆಗೆದು ಮಣ್ಣು ಹದಗೊಳಿಸಿ ಹೋಗುತ್ತಿದ್ದರು. ಹಾಗಾಗಿ

**ತಲಾ 500-1,000 ರೂಪಾಯಿ ಹಾಕಿ ರಸ್ತೆ ನಿರ್ಮಾಣ:**

ಶಾಶ್ವತ ರಸ್ತೆ ನಿರ್ಮಿಸಿಕೊಡುವಂತೆ ಶಾಸಕರಿಗೆ, ಸಂಸದರಿಗೆ ಹಾಗೂ ಅಧಿಕಾರಿಗಳಿಗೆ ಹತ್ತಾರು ಬಾರಿ ಮನವಿ ಮಾಡಿದರೂ ಯಾರೂ ತಿರುಗಿ ನೋಡಲಿಲ್ಲ. ಅಧಿಕಾರಿಗಳ ನಿರ್ಲಕ್ಷ್ಯ ಬೇಸರ ತರಿಸಿತು.

**ನಾವು ಕೈಕಟ್ಟಿ ಕೂರಲಿಲ್ಲ.**

ನಾವು ಕೈಕಟ್ಟಿ ಕೂರಲಿಲ್ಲ. ಬದಲಿಗೆ 500 ರಿಂದ 1,000 ರೂ.ಗಳವರೆಗೆ ಚಂದಾ ಹಣ ಸಂಗ್ರಹಿಸಿದ್ದೇವೆ. ಸ್ವಂತ ಖರ್ಚಿನಲ್ಲಿ ಜೆಸಿಬಿ ಮತ್ತು ಟ್ರ್ಯಾಕ್ಟರ್ ಬಳಸಿ ರಸ್ತೆಯನ್ನು ಸಮತಟ್ಟುಗೊಳಿಸಿದ್ದೇವೆ. ಗುಂಡಿಗಳಿಗೆ ಕಲ್ಲು-ಮಣ್ಣು ಹಾಕಿ 2-3 ಕಿ.ಮೀ ರಸ್ತೆಯಲ್ಲಿ ತಕ್ಕಮಟ್ಟಿಗೆ ಓಡಾಡುವಂತೆ ಮಾಡಿದ್ದೇವೆ.

ನಾವೇ ಮನೆ ಮನೆಗೆ 100,200,500,1000 ರೂಪಾಯಿ ಹಣ ಚಂದಾ ಎತ್ತಿ ಐದಾರು ಟ್ರ್ಯಾಕ್ಟರ್, ಜೆಸಿಪಿ ಮೂಲಕ ಕೆಲಸ ಮಾಡಿಸುತ್ತಿದ್ದೇವೆ. ಯಾವುದೇ ಆಸೆ ಆಕಾಂಕ್ಷೆಗಳನ್ನು ಇಟ್ಟುಕೊಂಡು ಕೆಲಸ ಮಾಡುತ್ತಿಲ್ಲ. ಈ ರಸ್ತೆಯಲ್ಲಿ ಎರಡು ಬಸ್‌ಗಳು ಓಡಾಡುತ್ತಿವೆ. ಮಳೆ ಬಂದು ನೀರು ನಿಂತರೆ ಈ ರಸ್ತೆಯಲ್ಲಿ ಬಸ್‌ಗಳು ಬರುವುದಿಲ್ಲ. ಇದರಿಂದ ಸಮಸ್ಯೆ ಆಗುತ್ತಿದೆ. ಬಸ್ ಇಲ್ಲವೆಂದರೆ ಸಂಚರಿಸಲು ತೊಂದರೆಯಾಗುತ್ತಿತ್ತು. ಈಗ ತಕ್ಕಮಟ್ಟಿಗೆ ಸರಿಯಾಗುತ್ತಿದೆ ಎಂದು ಅವರು ತಿಳಿಸಿದರು.

## ಜೆಸ್ಕಾಂ,ಕೆಪಿಟಿಸಿಎಲ್ ಪ್ರಗತಿ ಪರಿಶೀಲನಾ ಸಭೆ

• **ಉದಯವಾಹಿನಿ, ಕಲಬುರಗಿ,:**

ಜೇವರ್ಗಿಯ ತಾಲ್ಲೂಕು ಆಡಳಿತ ಕಚೇರಿಯಲ್ಲಿ ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ ಅವರ ಅಧ್ಯಕ್ಷತೆಯಲ್ಲಿ ಜೆಸ್ಕಾಂ ಮತ್ತು ಕೆ.ಪಿ.ಟಿ.ಸಿ.ಎಲ್ ಅಧಿಕಾರಿಗಳ ಮುಖ್ಯ ಪ್ರಗತಿ ಪರಿಶೀಲನಾ ಸಭೆ ನಡೆಯಿತು

ಜೆಸ್ಕಾಂ ಪ್ರಗತಿ ಪರಿಶೀಲನಾ ಸಭೆಗೂ ಮುನ್ನ ಜೇವರ್ಗಿ ತಾಲ್ಲೂಕಿನ ವಿವಿಧ ಗ್ರಾಮೀಣ ಮತ್ತು ನಗರ ಪ್ರದೇಶಗಳಿಗೆ ಖುದ್ದಾಗಿ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಲಾಯಿತು. ಈ ವೇಳೆ ಸಾರ್ವಜನಿಕರಿಗೆ ಅಪಾಯವನ್ನುಂಟುಮಾಡುವಂತಿದ್ದ ಹಾಗೂ ಶಿಥಿಲಾವಸ್ಥೆಯಲ್ಲಿದ್ದ ವಿದ್ಯುತ್ ಕಂಬಗಳನ್ನು ಗಮನಿಸಿ, ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ಅವುಗಳನ್ನು ತಕ್ಷಣವೇ ತೆರವುಗೊಳಿಸಿ ಹೊಸ ಕಂಬಗಳನ್ನು ಅಳವಡಿಸಲು ಅಧಿಕಾರಿಗಳಿಗೆ ಸೂಕ್ತ ಸೂಚನೆ ನೀಡಲಾಯಿತು.ನಂತರ, ಜೇವರ್ಗಿ ತಾಲ್ಲೂಕಿನ ಕೂಡಿ ದರ್ಗಾದಲ್ಲಿರುವ 33/11 ಕೆ.ವಿ ವಿದ್ಯುತ್ ಉಪಕೇಂದ್ರಕ್ಕೆ ಭೇಟಿ ನೀಡಿ, ಅಲ್ಲಿನ ವಿದ್ಯುತ್ ಸರಬರಾಜು ವ್ಯವಸ್ಥೆ, ನಿಯಂತ್ರಣ ಕೊಠಡಿ ಹಾಗೂ ತಾಂತ್ರಿಕ ಕಾರ್ಯವೈಖರಿಯನ್ನು ಪ್ರತ್ಯಕ್ಷವಾಗಿ ವೀಕ್ಷಿಸಿ ಪರಿಶೀಲಿಸಲಾಯಿತು.

ಜೇವರ್ಗಿಯ ತಾಲ್ಲೂಕು ಆಡಳಿತ ಕಚೇರಿಯಲ್ಲಿ ಜೆಸ್ಕಾಂ ಮತ್ತು ಕೆ.ಪಿ.ಟಿ.ಸಿ.ಎಲ್ ಅಧಿಕಾರಿಗಳ ಮುಖ್ಯ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಚಾಲ್ತಿಯಲ್ಲಿರುವ ಪ್ರತಿಯೊಂದು ಕಾಮಗಾರಿಯ



ಉದಯವಾಹಿನಿ ಚಿತ್ರ

> ಜೊತೆಗೆ, ಈಗಾಗಲೇ ಮಂಜೂರಾಗಿರುವ ಉಪಕೇಂದ್ರಗಳ ಹೊರತಾಗಿ, ವಿದ್ಯುತ್ ಬಳಕೆ ಹೆಚ್ಚಿರುವ ಪ್ರದೇಶಗಳಲ್ಲಿ ಸಾರ್ವಜನಿಕರ ಹಿತದೃಷ್ಟಿಯಿಂದ ಹೊಸ ವಿದ್ಯುತ್ ಉಪಕೇಂದ್ರ ಸ್ಥಾಪನೆಗೆ ಅಗತ್ಯ ಪ್ರಸ್ತಾಪನೆಗಳನ್ನು ಕೂಡಲೇ ಸಲ್ಲಿಸುವಂತೆ ಸೂಚಿಸಲಾಯಿತು.

ಪ್ರಗತಿಯನ್ನು ಪರಾಮರ್ಶಿಸಿ, ನಿಗದಿತ ಕಾಲಮಿತಿಯೊಳಗೆ ಕಡ್ಡಾಯವಾಗಿ ಪೂರ್ಣಗೊಳಿಸುವಂತೆ ಎಚ್ಚರಿಸಲಾಯಿತು.

ಮುಖ್ಯಮಂತ್ರಿಗಳ ಆದೇಶದಂತೆ ಪ್ರತಿಯೊಬ್ಬ ಫಲಾನುಭವಿಯ ಮನೆಗೂ ಭೇಟಿ ನೀಡಿ 'ಗೃಹ ಜ್ಯೋತಿ' ಯೋಜನೆಯ ಪರಿಶೀಲನೆ ನಡೆಸಲು, ಸಾರ್ವಜನಿಕರಿಗೆ ನಿರಂತರ ಹಾಗೂ ಗುಣಮಟ್ಟದ ವಿದ್ಯುತ್ ಪೂರೈಸಲು, ಬಾಕಿ ವಿದ್ಯುತ್ ಬಿಲ್ ಪಾವತಿಸದ ಸಂಪರ್ಕಗಳನ್ನು ಯಾವುದೇ ದಾಕ್ಷಿಣ್ಯವಿಲ್ಲದೆ ತಕ್ಷಣವೇ ವಿದ್ಯುತ್ ಕಡಿತಗೊಳಿಸಲು, ಅಕ್ರಮ ವಿದ್ಯುತ್ ಸಂಪರ್ಕಗಳಿಗೆ ತಡೆ ನೀಡಿ ಟ್ರಾನ್ಸ್‌ಫಾರ್ಮರ್‌ಗಳ ವೈಫಲ್ಯವನ್ನು ತಡೆಯಲು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ನಿರ್ದೇಶಿಸಲಾಯಿತು.

## ಬರ ನಿರ್ವಹಣೆಯಲ್ಲಿ ನಿರ್ಲಕ್ಷ್ಯತೆ ವಹಿಸದಂತೆ ಕಾರ್ಯನಿರ್ವಹಿಸಿ

• **ಉದಯವಾಹಿನಿ, ಕೊಟ್ಟೂರು:**

ಕೊಟ್ಟೂರು ತಾಲ್ಲೂಕು ಕಛೇರಿಯ ಮಹಾತ್ಮ ಗಾಂಧೀಜಿ ಸಭಾಂಗಣದಲ್ಲಿ ಇಂದು ಬರಗಾಲ ನಿರ್ವಹಣೆಯ ''ಟಾಸ್ಕ್ ಫೋರ್ಸ್ ಸಮಿತಿ'' ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಕೆ ನೇಮಿರಾಜ ನಾಯ್ಕ ಇವರು ಮುಂಗಾರಿನಲ್ಲಿ ಮಳೆಯ ಪ್ರಮಾನ ಅತ್ಯಂತ ಕಡಿಮೆ ಇದ್ದು ಬರಗಾಲದ ಲಕ್ಷಣಗಳು ಗೋಚರಿಸಿದ್ದು ಮುಂದಿನ ದಿನಗಳಲ್ಲಿ ಬರ ನಿರ್ವಹಣೆಯಲ್ಲಿ ಸಂಬಂಧಿಸಿದ ಇಲಾಖಾ ಅಧಿಕಾರಿಗಳು ನಿರ್ಲಕ್ಷತೆ ವಹಿಸದಂತೆ ಕಾರ್ಯನಿರ್ವಹಿಸಬೇಕೆಂದು ಸೂಚಿಸಿದರು. ಸಹಾಯಕ ಕೃಷಿ ನಿರ್ದೇಶಕರಾದ ತೇಜವರ್ಧನ್ಮಾತನಾಡಿ ಜೂನ್-ಜುಲೈ ನಲ್ಲಿ 107.2 ಮಿ.ಮೀ ಆಗಬೇಕಿದ್ದು ಹಾಲೀ 43.5 ಮಾತ್ರ ಆಗಿರುತ್ತದೆ ಶೇ 59ರಷ್ಟು ಕೊರತೆಯಾಗಿರುತ್ತದೆ ಈಬಾರಿ 14266 ಹೆಕ್ಟೇರ್ ಬಿತ್ತನೆಯಾಗಿದ್ದು 20035 ಹೆಕ್ಟೇರ್ ಬಿತ್ತನೆಯಾಗಿರುವುದಿಲ್ಲ ಬಿತ್ತನೆ ಕೇವಲ ಶೇ.42 ಮಾತ್ರ ಆಗಿರುತ್ತದೆ ಎಂದು ತಿಳಿಸಿದರು. ಆದ್ದರಿಂದ ಪರ್ಯಾಯ ಬೆಳೆಗಳಾದ ರಾಗಿ, ನವಣೆ, ಸಜ್ಜೆ, ಸೂರ್ಯಕಾಂತಿ ಬಿತ್ತನೆ ಮಾಡುವಂತೆ ಸಲಹೆಯನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು. ತೋಟಗಾರಿಕೆ ಸಹಾಯಕ ನಿರ್ದೇಶಕರಾದ ಕುಬೇರಾಚಾರಿ ಇವರು ತೋಟಗಾರಿಕೆ ಬೆಳೆಗಳನ್ನು 716 ಹೆಕ್ಟೇರ್ 315 ಹೆಕ್ಟಟ್



ಉದಯವಾಹಿನಿ ಚಿತ್ರ

> ರೇಷ್ಮೆ ವಿಸ್ತರಣಾಧಿಕಾರಿ ರಾಜಾಭಕ್ಷಿ ಇವರು ಕೊಟ್ಟೂರು ತಾಲೂಕಿನಲ್ಲಿ 110 ಹೆಕ್ಟರ್ ರೇಷ್ಮೆ ಬೆಳೆ ಗುರಿ ಇದ್ದು, 20 ಹೆಕ್ಟರ್ನಲ್ಲಿ ಬೆಳೆದಿರುತ್ತಾರೆ. ರಾಂಪುರ, ಚಿರಿಬಿ ಗ್ರಾಮದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ರೇಷ್ಮೆ ಬೆಳೆಯುತ್ತಿದ್ದು, ಕೊಟ್ಟೂರು-ಕೂಡ್ಲಿಗಿ ಭಾಗದ ರೇಷ್ಮೆಗೆ ಹೆಚ್ಚಿನ ಬೇಡಿಕೆ ಇದೆ ಎಂದು ತಿಳಿಸಿದರು. -ಕೆ ನೇಮಿರಾಜ ನಾಯ್ಕ

ಬಿತ್ತನೆಯಾಗಿದೆ. ಟಮೋಟಾ, ಮೆಣಸಿನಕಾಯಿ, ಈರುಳ್ಳಿ, ಮಿಡಿಸೌತೆ ಬೆಳೆದಿರುತ್ತಾರೆ. ರೈತರು ರೈತ ಆಪ್ನಲ್ಲಿ ಮಾಹಿತಿಯನ್ನು ನೀಡಬೇಕಿದೆ ಎಂದು ತಿಳಿಸಿದ್ದಕ್ಕೆ ರೈತರಿಗೆ ಮಾಹಿತಿ ಕೊರತೆ ಇರುತ್ತದೆ. ಅದ್ದರಿಂದ ನಿಮ್ಮ ಇಲಾಖೆಯವರಿಂದ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ತಿಳಿಸಿದರು.ರೈತರು ಸೋಲಾರ್ ವಿದ್ಯುತ್ ಅಳವಡಿಸಿಕೊಳ್ಳಲು ವ್ಯಾಪಕ ಪ್ರಚಾರ ಮಾಡಬೇಕು ಇದರಿಂದಾಗಿ ರೈತರಿಗೆ ವಿದ್ಯುತ್ ನಿಲುಗಡೆ ಸಮಸ್ಯೆಯಿಂದ ಆಗುವ ತೊಂದರೆ ತಪ್ಪುತ್ತದೆ ಎಂದು ತಿಳಿಸಿದರು.

## ವಿದ್ಯಾರ್ಥಿಗಳಿಗೆ 3 ತಿಂಗಳ ಉಚಿತ ಕೌಶಲ್ಯಾಭಿವೃದ್ಧಿ ತರಬೇತಿ: 'ಕೆರಿಯರ್ ಕನೆಕ್ಟ್'ಗೆ ಚಾಲನೆ.

• **ಉದಯವಾಹಿನಿ, ಚಿತ್ರದುರ್ಗ:**

ವಿದ್ಯಾರ್ಥಿಗಳು ಪದವಿಯ ಜೊತೆಗೆ ಸಂವಹನ ಕೌಶಲ್ಯ, ನಾಯಕತ್ವ ಗುಣಗಳು ಮತ್ತು ಉದ್ಯೋಗಕ್ಕೆ ಅಗತ್ಯವಾದ ಸಾಮರ್ಥ್ಯಗಳನ್ನು ಬೆಳೆಸಿಕೊಳ್ಳುವಂತೆ ಯುವ ಜನತೆಗೆ ಚಿತ್ರದುರ್ಗ ರೋಟರಿ ಟ್ರಸ್ಟ್‌ನ ಕಾರ್ಯದರ್ಶಿ ರೊ. ಪಿಡಿಜಿ ಮಧುಪ್ರಸಾದ್. ಕೆ ಕರೆ ನೀಡಿದರು. ಚಿತ್ರದುರ್ಗ ರೋಟರಿ ಟ್ರಸ್ಟ್ ಹಾಗೂ ಯುವಜಯ ಫೌಂಡೇಶನ್ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಎಸ್.ಆರ್.ಬಿ.ಎಂ.ಎಸ್. ರೋಟರಿ ಸೇವಾಭವನದಲ್ಲಿ ಹಮ್ಮಿಕೊಂಡಿದ್ದ ಪದವಿ ವಿದ್ಯಾರ್ಥಿಗಳ ಭವಿಷ್ಯದ ವೃತ್ತಿ ಜೀವನಕ್ಕೆ ಮಾರ್ಗದರ್ಶನ ನೀಡುವ ಉದ್ದೇಶದಿಂದ ಕೆರಿಯರ್ ಕನೆಕ್ಟ್'' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ರೋಟರಿ ಟ್ರಸ್ಟ್ ಶಿಕ್ಷಣ ಹಾಗೂ ಯುವಜನರ ಸಬಲೀಕರಣಕ್ಕಾಗಿ ನಿರಂತರವಾಗಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದೆ ಎಂದು ಹೇಳಿದರು.

ಯುವಜಯ ಫೌಂಡೇಶನ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿರೀಶ್ ನಾಗನೂರು ಮಾತನಾಡಿ, ಇಂದಿನ ಉದ್ಯೋಗ ಕ್ಷೇತ್ರದ ಅಗತ್ಯತೆಗಳು, ಹೊಸ ಅವಕಾಶಗಳು ಹಾಗೂ ಕೌಶಲ್ಯಾಧಾರಿತ ಶಿಕ್ಷಣದ ಮಹತ್ವವನ್ನು ವಿವರಿಸಿದರು. ವಿದ್ಯಾರ್ಥಿಗಳು ತಮ್ಮ ಆಸಕ್ತಿ ಮತ್ತು ಸಾಮರ್ಥ್ಯಕ್ಕೆ ಅನುಗುಣವಾಗಿ ವೃತ್ತಿ ಆಯ್ಕೆ


ಉದಯವಾಹಿನಿ ಚಿತ್ರ

ಮಾಡಿಕೊಂಡು ನಿರಂತರ ಕಲಿಕೆಯ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.ರೋಟರಿ ಕ್ಲಬ್ ಆಫ್ ಚಿತ್ರದುರ್ಗದ ಅಧ್ಯಕ್ಷ ರೊ. ಯೋಗೀಶ್ ಸಹ್ಯಾದ್ರಿ, ಅಧ್ಯಕ್ಷೀಯ ನುಡಿಗಳಲ್ಲಿ ಇಂತಹ ಕಾರ್ಯಕ್ರಮಗಳು ಗ್ರಾಮೀಣ ಹಾಗೂ ನಗರ ಪ್ರದೇಶದ ವಿದ್ಯಾರ್ಥಿಗಳ ನಡುವಿನ ಮಾಹಿತಿ ಅಂತರವನ್ನು ಕಡಿಮೆ ಮಾಡುವಲ್ಲಿ ಸಹಕಾರಿಯಾಗುತ್ತವೆ. ಶಿಕ್ಷಣದೊಂದಿಗೆ ವ್ಯಕ್ತಿತ್ವ ವಿಕಸನ, ಇಂಗ್ಲಿಷ್ ಸಂವಹನ ಕೌಶಲ್ಯ ಮತ್ತು ಆತ್ಮವಿಶ್ವಾಸವನ್ನು ಬೆಳೆಸಿಕೊಂಡರೆ ವಿದ್ಯಾರ್ಥಿಗಳು ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲೂ ಉತ್ತಮ ಸಾಧನೆ ಮಾಡಬಹುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಯುವಜಯ ಫೌಂಡೇಶನ್ ತರಬೇತಿದಾರರಾದ ಕಾರ್ತಿಕ ಮಾತನಾಡಿ, ಈ ಕಾರ್ಯಕ್ರಮದಲ್ಲಿ ವಿವಿಧ ಪದವಿ ಕಾಲೇಜುಗಳ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದ್ದಾರೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಉದ್ಯೋಗಾ ಅವಕಾಶಗಳು, ಕೌಶಲ್ಯಾಭಿವೃದ್ಧಿ, ವ್ಯಕ್ತಿತ್ವ ವಿಕಸನ ಹಾಗೂ ವೃತ್ತಿ ಯೋಜನೆ ಕುರಿತು 03 ತಿಂಗಳ ಕಾಲ ಮಾರ್ಗ ದರ್ಶನ ಪಡೆಯಲಿದ್ದಾರೆ. ಯುವಜನರಿಗೆ ಸರಿಯಾದ ಸಮಯದಲ್ಲಿ ಸೂಕ್ತ ದಿಕ್ಕು ತೋರಿಸುವ ಇಂತಹ ಕಾರ್ಯ ಕ್ರಮಗಳು ಅವರ ಭವಿಷ್ಯ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ರೊ. ಮೈಲೇಶ್ ಕುಮಾರ್. ಎ, ರೊ. ವಿಶ್ವನಾಥ್. ಜಿ.ಎ, ರೊ. ಮಾಧುರಿ ಮಧುಪ್ರಸಾದ್, ರೊ. ಮೂರ್ತಿ. ಎಂ.ವಿ, ಹಾಗೂ ಪದವಿ ವಿದ್ಯಾರ್ಥಿಗಳು ಭಾಗವಹಿಸಿ, ತಜ್ಞರೊಂದಿಗೆ ಸಂವಾದ ನಡೆಸಿ ತಮ್ಮ ವೃತ್ತಿ ಭವಿಷ್ಯಕ್ಕೆ ಸಂಬಂಧಿಸಿದ ಅನೇಕ ಪ್ರಶ್ನೆಗಳಿಗೆ ಉತ್ತರಗಳನ್ನು ಪಡೆದರು. ಚಿತ್ರದುರ್ಗ ರೋಟರಿ ಟ್ರಸ್ಟ್ ಮತ್ತು ಯುವಜಯ ಫೌಂಡೇಶನ್ ವತಿಯಿಂದ ಇಂತಹ ಯುವ ಸಬಲೀಕರಣ ಕಾರ್ಯಕ್ರಮಗಳ ಹೊಸ ಬ್ಯಾಚ್‌ಗಳನ್ನು ಮುಂದಿನ ದಿನಗಳಲ್ಲಿಯೂ ಆಯೋಜಿಸಲಾಗುವುದು ಎಂದು ಸಂಘಟಕರು ತಿಳಿಸಿದರು.

## ಮೊಬೈಲ್ ವ್ಯಸನದಿಂದ ಯುವಜನರ ಅಮೂಲ್ಯ ಜೀವನ ಹಾಳಾಗುತ್ತಿದೆ

• **ಉದಯವಾಹಿನಿ, ಔರಾದ, :**

ಯುವ ಜನತೆ ಮೊಬೈಲ್ ಅನ್ನು ಅತಿಯಾಗಿ ಬಳಸುತ್ತಾ ತಮ್ಮ ಅಮೂಲ್ಯ ಸಮಯವನ್ನು ವ್ಯರ್ಥ ಮಾಡಿಕೊಳ್ಳುವ ಮೂಲಕ ತಮ್ಮ ಭವಿಷ್ಯ ಹಾಗೂ ಅಮೂಲ್ಯ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ ಎಂದು ವಡಗಾಂವ ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಸಿದ್ದಯ್ಯ ಸ್ವಾಮಿ ಅವರು ಹೇಳಿದರು.

ಅವರು ಔರಾದ ತಾಲ್ಲೂಕಿನ ಖಾನಾಪೂರ ಗ್ರಾಮದ ಹನುಮಾನ ಮಂದಿರದಲ್ಲಿ ಶ್ರೀ ಕೇತಕಿ ಸಂಗಮೇಶ್ವರ ಕಲಾ ಸಾಹಿತ್ಯ ಜಾನಪದ ಕಲಾವಿದರ ಸಂಘ, ಬೆಲ್ದಾಳ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೀದರ ಇವರ ಸಂಯುಕ್ತಾಶ್ರಯದಲ್ಲಿ ಸಾಮಾನ್ಯ ಯೋಜನೆಯಡಿ ಆಯೋಜಿಸಿದ್ದ ಪ್ರಾಯೋಜಿತ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ರವೀಂದ್ರ ಪಾಟೀಲ್ ಅವರು ಮಾತನಾಡಿ, ಸಂಗೀತವು ಮನಸ್ಸಿಗೆ ಆನಂದವನ್ನು ನೀಡುವ ಕಲೆಯಾಗಿದ್ದು, ನಮ್ಮ ಕಲೆ, ಸಾಹಿತ್ಯ ಹಾಗೂ ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ಅತ್ಯಂತ ಅವಶ್ಯಕವಾಗಿದೆ. ಅವುಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ತಿಳಿಸಿದರು.

## ಖಾಸಗಿ ಶಾಲಾ ವಾಹನಗಳ ವೇಗಕ್ಕೆ ಕಡಿವಾಣ ಹಾಕಿ

• **ಉದಯವಾಹಿನಿ, ಔರಾದ್ :**

ಪಟ್ಟಣ ಹಾಗೂ ಗ್ರಾಮೀಣ ಭಾಗಗಳಲ್ಲಿ ಸಂಚರಿಸುವ ಖಾಸಗಿ ಶಾಲಾ ವಾಹನಗಳು ಅತಿವೇಗದಲ್ಲಿ ಸಂಚರಿಸುತ್ತಿರುವುದು ಸಾರ್ವಜನಿಕರಲ್ಲಿ ತೀವ್ರ ಆತಂಕಕ್ಕೆ ಕಾರಣವಾಗಿದೆ. ಶಾಲಾ ಮಕ್ಕಳ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ವಾಹನಗಳ ವೇಗಕ್ಕೆ ಕಡಿವಾಣ ಹಾಕಬೇಕೆಂದು ವಿಶ್ವ ಹಿಂದೂ ಪರಿಷತ್ ಕಾರ್ಯದರ್ಶಿ ಬಸವಕುಮಾರ ಚೌಕಂಪಳ್ಳೆ ಆಗ್ರಹಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಬೆಳಿಗ್ಗೆ ಹಾಗೂ ಸಂಜೆ ಶಾಲಾ ಸಮಯದಲ್ಲಿ ಅನೇಕ ಶಾಲಾ ಬಸ್‌ಗಳು, ವ್ಯಾನ್‌ಗಳು ಮತ್ತು ಇತರೆ ವಾಹನಗಳು ನಿಗದಿತ ವೇಗ ಮಿತಿಯನ್ನು ಮೀರಿ ಸಂಚರಿಸುತ್ತಿರುವುದು ಕಂಡುಬರುತ್ತಿದೆ. ಕೆಲ ಚಾಲಕರು ಸಂಚಾರ ನಿಯಮಗಳನ್ನು ಪಾಲಿಸದೇ ನಿರ್ಲಕ್ಷ್ಯದಿಂದ ವಾಹನ ಚಲಾಯಿಸುತ್ತಿರುವುದರಿಂದ ಅಪಘಾತ ಸಂಭವಿಸುವ ಭೀತಿ ಎದುರಾಗಿದೆ. ಶಾಲಾ ವಾಹನಗಳಲ್ಲಿ ಪುಟ್ಟ ಮಕ್ಕಳು ಪ್ರಯಾಣಿಸುತ್ತಿರುವುದರಿಂದ ಅವರ ಜೀವದ ಭದ್ರತೆ ಅತ್ಯಂತ ಮುಖ್ಯವಾಗಿದೆ. ಆದರೂ ಕೆಲವು ವಾಹನಗಳಲ್ಲಿ ಅತಿಯಾದ ವಿದ್ಯಾರ್ಥಿಗಳನ್ನು ಕೂರಿಸುವುದು, ವೇಗವಾಗಿ ಚಾಲನೆ ಮಾಡುವುದು ಹಾಗೂ ಸುರಕ್ಷತಾ ನಿಯಮಗಳನ್ನು ಪಾಲಿಸದಿರುವುದು ಪೋಷಕರಲ್ಲಿ ಆತಂಕ ಹೆಚ್ಚಿಸಿದೆ. ಸಂಚಾರ ಪೊಲೀಸ್ ಇಲಾಖೆ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಶಾಲಾ ವಾಹನಗಳ ವಿಶೇಷ ತಪಾಸಣೆ ನಡೆಸಿ, ವೇಗ ಮಿತಿ ಉಲ್ಲಂಘಿಸುವ ಚಾಲಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು.

## ಜಿಲ್ಲಾಮಟ್ಟದ ವಿವಿಧ ಸ್ಪರ್ಧೆಗಳು ಆಗಸ್ಟ್ 1 ರಂದು

• **ಉದಯವಾಹಿನಿ, ಮಂಗಳೂರು**

ಮೈ ಭಾರತ್ ಕೇಂದ್ರ, ದಕ್ಷಿಣ ಕನ್ನಡ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ (ದಕ್ಷಿಣ ಕನ್ನಡ), ರಾಷ್ಟ್ರೀಯ ಸೇವಾ ಯೋಜನೆ , ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ಶ್ರೀ ರಾಮಕೃಷ್ಣ ಕಾಲೇಜು ಮಂಗಳೂರು ಜಂಟಿ ಆಶ್ರಯದಲ್ಲಿ ''ನಶಾ ಮುಕ್ತ ಯುವ ವಿಕಸಿತ ಭಾರತ'' ದೇಶವ್ಯಾಪಿ ಅಭಿಯಾನದಡಿ, ಯುವಜನರಲ್ಲಿ ಜಾಗೃತಿ ಮೂಡಿಸಲು ಹಾಗೂ ಮಾದಕದ್ರವ್ಯ ಮುಕ್ತ ಸಮಾಜ ನಿರ್ಮಾಣಕ್ಕಾಗಿ ದಕ್ಷಿಣ ಕನ್ನಡ ಜಿಲ್ಲಾಮಟ್ಟದ ವಿವಿಧ ಸ್ಪರ್ಧೆಗಳನ್ನು ಆಗಸ್ಟ್ 1 ರಂದು ಬೆಳಿಗ್ಗೆ 9:30 ರಿಂದ ನಗರದ ಶ್ರೀ ರಾಮಕೃಷ್ಣ ಕಾಲೇಜಿನಲ್ಲಿ ಆಯೋಜಿಸಲಾಗಿದೆ.

ಸಮೂಹ ಗೀತೆ , ಸಮೂಹ ನೃತ್ಯ, ರೀಲ್ಸ್ / ಕಿರುಚಿತ್ರ ಸ್ಪರ್ಧೆ, ಮೂಕಾಭಿನಯ, ಸ್ಲ್ಯಾಮ್ ಪೊಯೆಟ್ರಿ ಕವನ ವಾಚನ), ಭಾಷಣ ಸ್ಪರ್ಧೆ ಘೋಷವಾಕ್ಯ ಬರಹ , ಚಿತ್ರಕಲೆ ಸ್ಪರ್ಧೆ ಜಿಲ್ಲಾಮಟ್ಟದಲ್ಲಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆಯುವ ವಿಜೇತರು ದಕ್ಷಿಣ ಕನ್ನಡ ಜಿಲ್ಲೆಯನ್ನು ಪ್ರತಿನಿಧಿಸಿ ರಾಜ್ಯ ಹಾಗೂ ರಾಷ್ಟ್ರಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಲು ಅರ್ಹತೆ ಪಡೆಯುತ್ತಾರೆ.

## ಮಳೆಗಾಗಿ ಭಜನೆ,ಮುಲ್ಲಾಮಾರಿ ನದಿಯ ನೀರಿನಿಂದ ಗಂಗಾಪೂಜೆ ಸಲ್ಲಿಸಿ ವಿಶೇಷ ಪ್ರಾರ್ಥನೆ

• **ಉದಯವಾಹಿನಿ,ಚಿಂಚೋಳಿ:**

ತಾಲ್ಲೂಕಿನ ಇರಗಪಳ್ಳಿ ಗ್ರಾಮದಲ್ಲಿ ಮಳೆಗಾಲ ಆಗಮಿಸಿ ಜೂನ್,ಜುಲೈ ಎರಡು ತಿಂಗಳು ಗತಿಸಿಹೋಗುತ್ತಿದರೂ ಮಳೆರಾಯನ ಆಗಮನ ಇಲ್ಲದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಹಾಗಾಗಿ ಗ್ರಾಮಸ್ಥರು ಒಗ್ಗೂಡಿ ಗ್ರಾಮ ದೇವತೆಯಾದ


ಮರಗೆಮ್ಮ,ಪೋಚಮ್ಮ,ಲಕ್ಷ್ಮಿ ದೇವತೆಗಳಿಗೆ ಕಳೆದ 11 ದಿನಗಳಿಂದ ಮಹಿಳೆಯರು,ಪುರುಷರು ಭಜನೆ ಮಾಡಿ,ಮುಲ್ಲಾಮಾರಿ ನದಿಯಿಂದ ಮುತ್ತೈದಿಯರು ನೀರು ತಂದು ಗಂಗಾಪೂಜೆ ಮಾಡಿ ಮಳೆಗಾಗಿ ಪ್ರಾರ್ಥಿಸಿದರು.

ಎರಡು ತಿಂಗಳಿಂದ ಮಳೆಯ ಆಗಮನವಿಲ್ಲದೆ ರೈತರು ಬಿತ್ತನೆ ಮಾಡಿದ ಬೆಳೆಗಳ ಮೊಳಕೆಗಳು ಒಣಗಿ ಹೋಗುತ್ತಿವೆ ಮತ್ತು ಧನಕರುಗಳಿಗೆ ಪ್ರಾಣಿಪಕ್ಷಿಗಳಿಗೂ ಕುಡಿಯಲು ನೀರು ಇಲ್ಲದೆ ಬಹಳಷ್ಟು ಕಷ್ಟಪಡುತ್ತಿವೆ ಹಾಗಾಗಿ ಮಳೆಯ ಕೃಪೆಗಾಗಿ ಗ್ರಾಮಸ್ಥರು ಸೇರಿಕೊಂಡು ಗ್ರಾಮದೇವತೆಗಳಿಗೆ ಭಜನೆ,ಗಂಗಾಪೂಜೆ ಸಲ್ಲಿಸಿ ವಿಶೇಷ ಪ್ರಾರ್ಥನೆ ಮಾಡುತ್ತಿದೇವೆ ಎಂದು ಗ್ರಾಮಸ್ಥರಾದ ಸುಭಾನರೆಡ್ಡಿ ಪಾಟೀಲ ಮತ್ತು ನ್ಯಾಮತ್ ಪಟೇಲ್ ಹೇಳಿದರು.

**ಈ ಸಂದರ್ಭದಲ್ಲಿ:**-ಅಶೋಕ ಸವದಿ,ಶಿವರಾಜ ರಾವಜೀ,ಸಂತೋಷ ತವದಿ,ನರಸಿಂಹರೆಡ್ಡಿ,ನಾಗ್ರೇಂದ್ರಪ್ಪ ಪೂಜಾರಿ,ಬಸವರಾಜ ಗಾರಂಪಳ್ಳಿ,ಅಮೃತ,ಮಾರುತಿ ತಳವಾರ,ಸೋಮಶೇಖರ, ಬಿಚ್ಚಪ್ಪಾ,ರಮೇಶ ಬಿರಾದಾರ,ಸಾಯಪ್ಪ,ಅನೇಕರಿದ್ದರು.

**ಇರಕಪಳ್ಳಿ ಸಂಪರ್ಕ ಹದಗೆಟ್ಟ ರಸ್ತೆ:**- ಈಗಾಗಲೇ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲರು ಡಾಂಬರೀಕರಣ ರಸ್ತೆ ಅಭಿವೃದ್ಧಿಗೆ ಇರಕಪಳ್ಳಿ-ಬುರಕಪಳ್ಳಿ-ಕೋಡಂಪಳಿ ಒಟ್ಟಾರೆ 7.50ಕಿಮೀಗೆ 10ಕೋಟಿ ರೂ.ಮಂಜೂರು ಮಾಡಿದ್ದಾರೆ.

ಅದರಲ್ಲಿ ಬುರಕಪಳ್ಳಿ,ಕೋಡಂಪಳ್ಳಿ ರಸ್ತೆ ಪೂರ್ಣಗೊಂಡಿದೆ ಮುಖ್ಯರಸ್ತೆಯಿಂದ ಇರಗಪಳ್ಳಿವರೆಗೆ 02ಕಿಮೀ ಮಾತ್ರ ಬಾಕಿವಿದ್ದು ರಸ್ತೆ ಅಕ್ಕಪಕ್ಕದಲ್ಲಿರುವ ರೈತರು ನ್ಯಾಯಾಲಯ ಮೊರೆ ಹೋದ ಕಾರಣ ರಸ್ತೆ ಕಾಮಾಗಾರಿ ಸ್ಥಗಿತಗೊಂಡಿದೆ ಎಂದು ಗ್ರಾಮದ ಮುಖಂಡ ನ್ಯಾಮತ್ ಪಟೇಲ್,ಸುಬಾನರೆಡ್ಡಿ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

# ಭಾರಿ ಮಳೆ ಮುನ್ನೆಚ್ಚರಿಕೆ: ದ.ಕನ್ನಡದ ಎಲ್ಲಾ ಪ್ರೌಢಶಾಲೆಗಳವರೆಗೆ ರಜೆ ಘೋಷಣೆ

### ಬಿರುಗಾಳಿ ಸಹಿತ ಭಾರಿ ಮಳೆಯಾಗುವ ಸಾಧ್ಯತೆ ಇರುವುದರಿಂದ ಹವಾಮಾನ ಇಲಾಖೆಯು ಜುಲೈ 24ರವರೆಗೆ ಆರೆಂಜ್ ಅಲರ್ಟ್ ಘೋಷಿಸಿದೆ

• **ಉದಯವಾಹಿನಿ, ದಕ್ಷಿಣ ಕನ್ನಡ:**

ಭಾರತೀಯ ಹವಾಮಾನ ಇಲಾಖೆ ಹಾಗೂ ಕರ್ನಾಟಕ ರಾಜ್ಯ ನಿಸರ್ಗ ವಿಕೋಪ ಉಸ್ತುವಾರಿ ಕೇಂದ್ರ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ನೀಡಿರುವ

**1 : ತಗ್ಗು ಪ್ರದೇಶ ನದಿ ತೀರಕ್ಕೆ ಹೋಗಬೇಡಿ**
**2 : ತೀರಕ್ಕೆ ತೆರಳುವುದನ್ನು ನಿಷೇಧಿಸಲಾಗಿದೆ**
**3 : ಜುಲೈ 24ರವರೆಗೆ ಆರೆಂಜ್ ಅಲರ್ಟ್**

ಹಿನ್ನೆಲೆಯಲ್ಲಿ, ಮುನ್ನೆಚ್ಚರಿಕಾ ಕ್ರಮವಾಗಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಇಂದು ಜಿಲ್ಲೆಯ ಎಲ್ಲಾ ಶಾಲಾ - ಕಾಲೇಜುಗಳಿಗೆ ರಜೆ ಘೋಷಿಸಿ ಆದೇಶ ಹೊರಡಿಸಿದೆ. ಜಿಲ್ಲೆಯ ಎಲ್ಲ ಅಂಗನವಾಡಿಗಳು ಜಿಲ್ಲೆಯ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು (ವಸತಿ ಶಾಲೆಗಳು ಸೇರಿದಂತೆ) ಜಿಲ್ಲೆಯ ಎಲ್ಲಾ ಪದವಿ ಪೂರ್ವ ಕಾಲೇಜುಗಳು / 12ನೇ ತರಗತಿವರೆಗೆ (ವಸತಿ ಕಾಲೇಜುಗಳು ಸೇರಿದಂತೆ) ಜಿಲ್ಲೆಯ ಎಲ್ಲಾ ಹಾಗೂ ಡಿಪ್ಲೊಮಾ ಕಾಲೇಜುಗಳು (ವಸತಿ ಕಾಲೇಜುಗಳು ಸೇರಿದಂತೆ) ರಜೆ ಘೋಷಿಸಲಾಗಿದೆ. ಪ್ರವಾಸಿಗರು ಮತ್ತು ಸಾರ್ವಜನಿಕರು ನದಿ ತೀರ ಹಾಗೂ ಸಮುದ್ರ ತೀರಕ್ಕೆ ತೆರಳುವುದನ್ನು ನಿಷೇಧಿಸಲಾಗಿದೆ.

ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು, ತಕ್ಷಣ ಸ್ಪಂದಿಸಲು ಆದೇಶ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಎಲ್ಲಾ




> ಜಿಲ್ಲೆಯಲ್ಲಿ ಬಿರುಗಾಳಿ ಸಹಿತ ಭಾರಿ ಮಳೆಯಾಗುವ ಸಾಧ್ಯತೆ ಇರುವುದರಿಂದ ಹವಾಮಾನ ಇಲಾಖೆಯು ಜುಲೈ 24ರವರೆಗೆ ಆರೆಂಜ್ ಅಲರ್ಟ್ ಘೋಷಿಸಿದೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಸುರಕ್ಷತೆಯ ದೃಷ್ಟಿಯಿಂದ ಶಿರಸಿ, ಸಿದ್ದಾಪುರ ಮತ್ತು ಜೋಯಿಡಾ ತಾಲ್ಲೂಕುಗಳ ಎಲ್ಲಾ ಅಂಗನವಾಡಿ, ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಇಂದುದು ರಜೆ ಘೋಷಿಸಿ ಪರಿಷ್ಕೃತ ಆದೇಶ ಹೊರಡಿಸಿದ್ದಾರೆ. -ಜಿಲ್ಲಾಧಿಕಾರಿ

> ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಈ ಪ್ರಕಟಣೆ ಹೊರಡಿಸಿದ್ದು, ರಜೆ ಆದೇಶವನ್ನು ಉಲ್ಲಂಘಿಸುವ ಸಂಸ್ಥೆಗಳ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಪ್ರಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ. -ಜಿಲ್ಲಾಧಿಕಾರಿ

ಇಲಾಖಾ ಅಧಿಕಾರಿಗಳು ಕಡ್ಡಾಯವಾಗಿ ತಮ್ಮ ಕೇಂದ್ರ ಸ್ಥಾನದಲ್ಲಿದ್ದು, ವಿಪತ್ತು ನಿರ್ವಹಣಾ ಕಾರ್ಯವನ್ನು ತಕ್ಷಣವೇ ಕೈಗೊಳ್ಳಬೇಕು.

ಸಾರ್ವಜನಿಕ ದೂರುಗಳಿಗೆ ತಕ್ಷಣ ಸ್ಪಂದಿಸಲು ಹಾಗೂ ಜಿಲ್ಲಾಧಿಕಾರಿ ಕಛೇರಿಯ ನಿಯಂತ್ರಣ ಕೊಠಡಿಯೊಂದಿಗೆ ನಿರಂತರ ಸಂಪರ್ಕದಲ್ಲಿರಲು ಜಿಲ್ಲಾಡಳಿತ ನಿರ್ದೇಶಿಸಿದೆ. ಪ್ರತಿಯೊಂದು ತಾಲೂಕಿನಲ್ಲಿಯೂ ಕಾಳಜಿ ಕೇಂದ್ರಗಳನ್ನು ತೆರೆದು ಸಜ್ಜುಗೊಳಿಸಲು ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ, ಹಾಗೂ ಹವಾಮಾನ ಇಲಾಖೆಯ ವರದಿಯಂತೆ, ಜಿಲ್ಲೆಯಲ್ಲಿ ಗಂಟೆಗೆ 30 - 40 ಕಿ.ಮೀ ವೇಗದಲ್ಲಿ ಬಲವಾದ ಗಾಳಿ ಬೀಸಲಿದ್ದು, ಭಾರಿ ಮಳೆಯಾಗುವ ಸಾಧ್ಯತೆ ಇರುವ ಬಗ್ಗೆ ತಿಳಿಸಿದೆ.

ಸಮುದ್ರದಲ್ಲಿ ಅಲೆಗಳ ಅಬ್ಬರ ಹೆಚ್ಚಿರಲಿದ್ದು, ಮೀನುಗಾರರು ಕಡಲಿಗೆ ಇಳಿಯಬಾರದು. ನದಿ, ಕೆರೆ, ಕಡಲತೀರ ಹಾಗೂ

**ತಗ್ಗು ಪ್ರದೇಶ ಹಾಗೂ ನದಿ ತೀರಕ್ಕೆ ಹೋಗಬೇಡಿ:**

ನೀರು ಇರುವ ತಗ್ಗು ಪ್ರದೇಶಗಳು, ಕೆರೆ, ನದಿ ತೀರ ಹಾಗೂ ಸಮುದ್ರ ತೀರಕ್ಕೆ ಸಾರ್ವಜನಿಕರು ಮತ್ತು ಮಕ್ಕಳು ತೆರಳದಂತೆ ಸೂಚಿಸಲಾಗಿದೆ.ಮೀನುಗಾರರಿಗೆ ಅಪಾಯದ ಮುನ್ನೆಚ್ಚರಿಕೆ ಕಡಲು ಕಾದಿರುವ ಹಿನ್ನೆಲೆಯಲ್ಲಿ ಮೀನುಗಾರರು ಸಮುದ್ರಕ್ಕೆ ಇಳಿಯಬಾರದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ತಗ್ಗು ಪ್ರದೇಶಗಳಿಗೆ ಪ್ರವಾಸಿಗರು ಮತ್ತು ಸಾರ್ವಜನಿಕರು ತೆರಳಬಾರದು. ಪೋಷಕರು ತಮ್ಮ ಮಕ್ಕಳನ್ನು ನೀರಿರುವ ಸ್ಥಳಗಳಿಗೆ ಕಳುಹಿಸದಂತೆ ಎಚ್ಚರ ವಹಿಸಬೇಕು ಎಂದು ಸೂಚಿಸಲಾಗಿದೆ. ಶಿಥಿಲಾವಸ್ಥೆಯಲ್ಲಿರುವ ಕಾಂಪೌಂಡ್‌ಗಳು, ಹಳೆಯ ಗೋಡೆ ಹಾಗೂ ಅಪಾಯಕಾರಿ ಕಟ್ಟಡಗಳಲ್ಲಿ ವಾಸಿಸುವವರು ತಕ್ಷಣವೇ ಸುರಕ್ಷಿತ ಸ್ಥಳ ಅಥವಾ ಕಾಳಜಿ ಕೇಂದ್ರಗಳಿಗೆ ತೆರಳಬೇಕು. ಮಳೆಯ ಸಂದರ್ಭದಲ್ಲಿ ವಿದ್ಯುತ್ ಕಂಬ, ತುಂಡಾದ ತಂತಿಗಳು ಹಾಗೂ ದೊಡ್ಡ ಮರಗಳ ಕೆಳಗೆ ನಿಲ್ಲಬಾರದು.

ಗ್ರಾಮೀಣ ಪ್ರದೇಶದ ಕಾಲುವೆ, ಕಾಲುಸಂಕ ಹಾಗೂ ಕಿರು ಸೇತುವೆಗಳನ್ನು ದಾಟುವಾಗ ಎಚ್ಚರಿಕೆ ವಹಿಸುವಂತೆ ಸೂಚಿಸಿದೆ. ಜಗಲಭೇಟ್‌ಕ್ಯಾಸಲ್‌ರಾಕ್ ರಸ್ತೆ ಅಪಾಯದಂಚಿನಲ್ಲಿ ಕುಸಿತ-ನಿರಂತರ ಸುರಿಯುತ್ತಿರುವ ಭಾರಿ ಮಳೆಯ ಪರಿಣಾಮ ಜೋಯಿಡಾ ತಾಲ್ಲೂಕಿನ ಜಗಲಭೇಟ್ ಕ್ಯಾಸಲ್ ರಾಕ್ ರಸ್ತೆಯ ಅಸ್ಸು ಸಮೀಪ ರಸ್ತೆ ಅಪಾಯಕಾರಿ ಸ್ಥಿತಿಗೆ ತಲುಪಿದ್ದು, ಸ್ಥಳೀಯರಲ್ಲಿ ಆತಂಕ ಮನೆಮಾಡಿದೆ.